ಸಂಪುಟ : 11 ಸಂಚಿಕೆ: 76 ಪುಟ : 4+2 ಬೆಲೆ: 3.00 ಗುರುವಾರ ಎಪ್ರಿಲ್ 23 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 76 Pages : 4+2 Price : 3.00 Thursday April 23 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಉಚಿತ ಸಾಮೂಹಿಕ ವಿವಾಹದಿಂದ ಸೌಹಾರ್ದತೆ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಸಾಮೂಹಿಕ ವಿವಾಹಗಳಿಂದ ಸಾಮರಸ್ಯದ ಜತೆಗೆ ಸೌಹಾರ್ದತೆ ಬೆಳೆಯಲಿದೆ ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ, ಶಾಸಕ ಜಿ.ಎಸ್.ಪಾಟೀಲ ಹೇಳಿದರು.

ಗಜೇಂದ್ರಗಡ ತಾಲೂಕಿನ ಕೊಡಗಾನೂರ ಗ್ರಾಮದಲ್ಲಿ ಶರಣಬಸವೇಶ್ವರ ದೇವಸ್ಥಾನದಲ್ಲಿ 33ನೇ ವರ್ಷದ ಪುರಾಣ ಮಂಗಳೋತ್ಸವ ನಿಮಿತ್ತ ಹಮ್ಮಿಕೊಂಡಿದ್ದ ಉಚಿತ ಸಾಮೂಹಿಕ ವಿವಾಹದಲ್ಲಿ ನವ ಜೋಡಿಗಳಿಗೆ ಶುಭ ಹಾರೈಸಿ ಮಾತನಾಡಿದರು.

ಸಾಮೂಹಿಕ ವಿವಾಹ ಪದ್ಧತಿಯಿಂದ ಬಡಕುಟುಂಬಗಳಿಗೆ ಆರ್ಥಿಕ ಹೊರೆ ತಪ್ಪುವುದು. ಅಲ್ಲದೇ ಪ್ರಜ್ಞಾಪೂರ್ವಕವಾಗಿ ಸರಳತೆಗೆ ಸಾಮೂಹಿಕ ವಿವಾಹ ಮಾದರಿಯಾಗಿದೆ. ಸಮಾಜದಲ್ಲಿನ ಎಲ್ಲ ಸಮುದಾಯಗಳು ಒಗ್ಗೂಡಿ ನಡೆಸುವ ಈ ರೀತಿಯ ಕಾರ್ಯಕ್ರಮಗಳಿಂದ ಸೌಹಾರ್ದತೆ, ಸಾಮರಸ್ಯ ಹಾಗೂ ಪರಸ್ಪರ ಬಾಂಧವ್ಯ ಬೆಳೆಯಲಿದೆ ಎಂದರು.

ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ಮದುವೆ ಒಂದು ದೊಡ್ಡ ಹೊರೆ ಆಗಿದ್ದು, ಇಂತಹ ಸಾಮೂಹಿಕ ವಿವಾಹ ಕಾರ್ಯಕ್ರಮಗಳು ಅವರಿಗೆ ನೆರವಾಗುವುದರ ಜೊತೆಗೆ ಸಮಾಜದಲ್ಲಿ ಸಮಾನತೆ ಮತ್ತು ಸಹಕಾರದ ಮನೋಭಾವವನ್ನು ಉತ್ತೇಜಿಸುತ್ತವೆ ಎಂದು ತಿಳಿಸಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವೀರಣ್ಣ ಶೆಟ್ಟರ ಮಾತನಾಡಿ, ಹೊಸ ದಾಂಪತ್ಯಕ್ಕೆ ಕಾಲಿಟ್ಟ ವಧು-ವರರು ಪರಸ್ಪರ ಒಬ್ಬರೊನ್ನೊಬ್ಬರು ಅರಿತು ಸಹಬಾಳ್ವೆ ನಡೆಸಿದಾಗಲೇ ದಾಂಪತ್ಯ ಜೀವನಕ್ಕೆ ಉತ್ತಮ ಅರ್ಥ ಸಿಗುತ್ತದೆ ಎಂದರು.

ಈ ಸಮಯದಲ್ಲಿ ಶಿವರಾಜ್ ಘೋರ್ಪಡೆ, ಶೇಖಪ್ಪ ರಾಮಜಿ,ಉಮೇಶ ರಾಠೋಡ, ಹನುಮಂತ ರಾಮಜಿ, ಭೀಮಣ್ಣ ತಳವಾರ, ನಾಗಯ್ಯ ಹಿರೇಮಠ ರಾಚಯ್ಯ ಬಾಳಿಕಾಯಿಮಠ ಬಾಲಚಂದ್ರ ವಾಲ್ಮೀಕಿ, ಯೂಸುಫ್ ಇಟಗಿ,ಕುಮಾರ ರಾಠೋಡ, ಮುತ್ತಪ್ಪ ಮಾಳವತ್ತ , ಕೊಟ್ರೇಶ್ ಹೂಗಾರ, ವೀರಯ್ಯ ಬಣ್ಣದಮಠ, ವೀರಯ್ಯ ಬಾಳಿಕಾಯಿಮಠ ಇತರರು ಉಪಸ್ಥಿತರಿದ್ದರು.

## ಬೇಸಿಗೆ ಹಿನ್ನೆಲೆ – 55 ಗ್ರಾಮಗಳು, 60 ವಾರ್ಡ್‌ಗಳು ಮುಂಜಾಗ್ರತೆಗೆ ಗುರುತು; 29 ಬೋರ್‌ವೆಲ್ ಸಿದ್ಧತೆ–ಡಿಸಿ ಶ್ರೀಧರ್

# ಕುಡಿಯುವ ನೀರಿಗೆ ಪ್ರಥಮ ಆದ್ಯತೆ

■ವಿಜಯಸಾಕ್ಷಿ ಸುದ್ದಿ, ಗದಗ

ಬೇಸಿಗೆ ದಿನಗಳಲ್ಲಿ ಜಿಲ್ಲೆಯಾದ್ಯಂತ ಕುಡಿಯುವ ನೀರಿನ ಪೂರೈಕೆಗೆ ಪ್ರಥಮ ಆದ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ನೀರಿನ ಸಮಸ್ಯೆ ಉಂಟಾಗದಂತೆ ಯುದ್ಧೋಪಾದಿಯಲ್ಲಿ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು. ಅಗತ್ಯವಿದ್ದಲ್ಲಿ ಖಾಸಗಿ ಬೋರ್‌ವೆಲ್‌ಗಳ ಮೂಲಕ ನೀರು ಪೂರೈಸಲು ಪೂರ್ವಸಿದ್ಧತೆ ಮಾಡಿಕೊಳ್ಳಬೇಕು. ಈಗಿರುವ ಬೋರ್‌ವೆಲ್‌ಗಳನ್ನು



ದುರಸ್ತಿ ಮಾಡಿಸಿ ಸುಸ್ಥಿತಿಯಲ್ಲಿ ಇರಿಸಬೇಕು ಎಂದರು.

ಬಿಸಿಲಿನ ತಾಪಮಾನ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು. ವಿಶೇಷವಾಗಿ ಹಿರಿಯ ನಾಗರಿಕರು, ಗರ್ಭಿಣಿಯರು ಹಾಗೂ ಮಕ್ಕಳಿಗೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಸಲಹೆ ನೀಡಿದರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಅವರು ಮಾತನಾಡಿ, ಹೀಟ್‌ವೇವ್ ಪರಿಣಾಮದಿಂದ ಆರೋಗ್ಯ ಸಮಸ್ಯೆಗಳು ಉಂಟಾಗುವ ಸಾಧ್ಯತೆ ಇರುವುದರಿಂದ ಗ್ರಾಮೀಣ ಪ್ರದೇಶಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಹೇಳಿದರು. ಸಭೆಯಲ್ಲಿ ನೀಡಿದ ಮಾಹಿತಿಯಂತೆ, ಜಿಗಳೂರು ಗ್ರಾಮದ ಸಮೀಪದ ಜಲಸಂಗ್ರಹಗಾರದಲ್ಲಿ 2510 ಎಂಎಲ್‌ಡಿ (0.08 ಟಿಎಂಸಿ) ನೀರು ಸಂಗ್ರಹವಿದ್ದು, ರೋಣ, ಗಜೇಂದ್ರಗಡ ಮತ್ತು ನರೇಗಲ್ ಪಟ್ಟಣಗಳಿಗೆ ಸುಮಾರು 7 ತಿಂಗಳ ಕಾಲ ಪೂರೈಕೆ ಸಾಧ್ಯವಾಗಿದೆ. ನವಿಲುತೀರ್ಥ ಅಣೆಕಟ್ಟಿನಲ್ಲಿ 8.259 ಟಿಎಂಸಿ, ಭದ್ರಾ ಅಣೆಕಟ್ಟಿನಲ್ಲಿ 25.548 ಟಿಎಂಸಿ ಹಾಗೂ ಶಿಂಗಟಾಲೂರ ಬ್ಯಾರೇಜ್‌ನಲ್ಲಿ 1.828 ಟಿಎಂಸಿ ನೀರು ಲಭ್ಯವಿದೆ. ಪ್ರಸ್ತುತ ಲಭ್ಯವಿರುವ ನೀರು ಮುಂದಿನ 72 ದಿನಗಳಿಗೆ ಸಾಕಾಗಲಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು. ಸಭೆಯಲ್ಲಿ ಡಿವೈಎಸ್‌ಪಿ ಮಹಾಂತೇಶ ಸಜ್ಜನರ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷ್ ಕೆ., ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತ ರಾಜಾರಾಮ್ ಪವಾರ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಎಸ್. ಬುರುಡಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

> "ಬೇಸಿಗೆ ಸಂದರ್ಭದಲ್ಲಿಯೇ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಅಧಿಕಾರಿಗಳು ಮುಂಚಿತವಾಗಿ ಸಕಾಲಿಕ ಕ್ರಮಗಳನ್ನು ಕೈಗೊಳ್ಳಬೇಕು,"
>
> **– ಸಿ.ಎನ್. ಶ್ರೀಧರ್,** ಜಿಲ್ಲಾಧಿಕಾರಿ.

ಜಿಲ್ಲೆಯಲ್ಲಿ ಸದ್ಯ ಕುಡಿಯುವ ನೀರಿನ ತುರ್ತು ಸಮಸ್ಯೆ ಇಲ್ಲದಿದ್ದರೂ, ಮುಂಬರುವ ದಿನಗಳಲ್ಲಿ ಸಮಸ್ಯೆ ಉಂಟಾಗುವ ಸಾಧ್ಯತೆ ಇರುವ 55 ಗ್ರಾಮಗಳನ್ನು ಮುಂಜಾಗ್ರತೆಗಾಗಿ ಗುರುತಿಸಲಾಗಿದೆ. ಹಾಗೆಯೇ 9 ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ 60 ವಾರ್ಡ್‌ಗಳನ್ನು ಗುರುತಿಸಲಾಗಿದ್ದು, ನೀರಿನ ಕೊರತೆ ಎದುರಾಗಬಹುದಾದ ವಾರ್ಡ್‌ಗಳಲ್ಲಿ ಪೂರೈಕೆಗೆ 29 ಹೆಚ್ಚಿನ ಇಳುವರಿ ನೀಡುವ ಬೋರ್‌ವೆಲ್‌ಗಳನ್ನು ಸಿದ್ಧಪಡಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದರು.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2026–27ನೇ ಸಾಲಿನ ಆತ್ಮ ಯೋಜನೆಯಡಿ ಜಂಟಿ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಖಾಲಿ ಇರುವ ನೇರಗುತ್ತಿಗೆ ಆಧಾರಿತ ಕಂಪ್ಯೂಟರ್ ಪ್ರೋಗ್ರಾಮರ್/ಆಪರೇಟರ್ (AP) ತಾತ್ಕಾಲಿಕ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ.

ಈ ಹುದ್ದೆ ಕೇಂದ್ರ ಕಚೇರಿಯ ಕ್ರಿಯಾ ಯೋಜನೆಯಂತೆ ಮುಂದುವರಿಯಲಿದೆ. ಅರ್ಹತೆಗಳಾಗಿ ಕಂಪ್ಯೂಟರ್ ಪ್ರೋಗ್ರಾಮರ್ ಹುದ್ದೆಗೆ ಃ.ಖಿಜಚಿ/ಒಅಂ ಹಾಗೂ ಕಂಪ್ಯೂಟರ್ ಆಪರೇಟರ್ ಹುದ್ದೆಗೆ ಃಅಂ ಅಥವಾ ಕಂಪ್ಯೂಟರ್ ಜ್ಞಾನ ಹೊಂದಿದ ಪದವಿ ಅಗತ್ಯವಿದೆ. ಜೊತೆಗೆ, ಃ.ಖಿಜಚಿ ಅಭ್ಯರ್ಥಿಗಳಿಗೆ ಒಂದು ವರ್ಷದ ಅನುಭವ ಮತ್ತು ಒಅಂ ಅಭ್ಯರ್ಥಿಗಳಿಗೆ ಎರಡು ವರ್ಷದ ಅನುಭವ ಕಡ್ಡಾಯವಾಗಿದೆ.

ಅಭ್ಯರ್ಥಿಗಳು ತಮ್ಮ ಛಾಯಾಚಿತ್ರ, ವಿದ್ಯಾರ್ಹತೆ ಪ್ರಮಾಣ ಪತ್ರಗಳು, ಅನುಭವ ಪ್ರಮಾಣ ಪತ್ರ, ಆಧಾರ್ ಪ್ರತಿ ಹಾಗೂ ಕಂಪ್ಯೂಟರ್ ತರಬೇತಿ ಪ್ರಮಾಣ ಪತ್ರಗಳ ದೃಢೀಕೃತ ಪ್ರತಿಗಳನ್ನು ಸಲ್ಲಿಸಬೇಕು.

ಅರ್ಜಿಗಳನ್ನು ಎಪ್ರಿಲ್ 30ರೊಳಗೆ ಸಂಜೆ 5 ಗಂಟೆಯೊಳಗಾಗಿ ಜಂಟಿ ಕೃಷಿ ನಿರ್ದೇಶಕರ ಕಚೇರಿ, ಹುಡ್ಕೊ ಕಾಲೋನಿ, ನೌಕರ ಭವನ ಹತ್ತಿರ, ಮುಳಗುಂದ ರಸ್ತೆ, ಗದಗ-582103ಕ್ಕೆ ಸಲ್ಲಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಉಪ ಯೋಜನಾ ನಿರ್ದೇಶಕರು, ಆತ್ಮ ಯೋಜನೆ, ಗದಗ ಇವರ ದೂರವಾಣಿ ಸಂಖ್ಯೆ 8217773915ನ್ನು ಸಂಪರ್ಕಿಸಬಹುದು.

## ಮೇ 1ರಂದು ಜಿಲ್ಲಾ ಮಟ್ಟದ ಕಾರ್ಯಕ್ರಮ – ವಿದ್ಯಾರ್ಥಿಗಳು, ಸಾಧಕರಿಗೆ ಸನ್ಮಾನ

# ಬುದ್ಧ ಜಯಂತಿ ಅರ್ಥಪೂರ್ಣವಾಗಿ ಆಚರಿಸಲು ಸೂಚನೆ



■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಭಗವಾನ್ ಬುದ್ಧ ಜಯಂತಿಯನ್ನು ಮೇ 1ರಂದು ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ವ್ಯವಸ್ಥಿತವಾಗಿ ಹಾಗೂ ಅಚ್ಚುಕಟ್ಟಾಗಿ ಆಚರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್. ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ತಾಲೂಕು ಮಟ್ಟದಲ್ಲಿ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ಜಯಂತಿ ಆಚರಣೆ ನಡೆಸುವಂತೆ ತಿಳಿಸಿದರು.

ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳು ಮತ್ತು ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಸಮಾಜದ ಹಿರಿಯರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತದೆ. ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ಕೈಗೊಳ್ಳಬೇಕು. ಬುದ್ಧರ ತತ್ವಗಳ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತದೆ ಎಂದು ತಿಳಿಸಿದರು.

ಇದೇ ವೇಳೆ ಊಟೋಪಹಾರ, ವೇದಿಕೆ ಸಿದ್ಧತೆ ಹಾಗೂ ಬ್ಯಾನರ್ ಅಳವಡಿಕೆ ಕುರಿತು ಚರ್ಚಿಸಲಾಯಿತು. ಸಭೆಯಲ್ಲಿ ಎಸ್.ಎನ್. ಬಳ್ಳಾರಿ, ಸತೀಶ ಹೂಲಿ, ಐ.ಕೆ. ಕಮ್ಮಾರ, ಅಂದಾನಪ್ಪ ವಿಭೂತಿ, ಸತೀಶ ಪಾಶಿ, ಅಶೋಕ ಬರಗುಂಡಿ, ಪ್ರಕಾಶ ಅಸುಂಡಿ, ಸಿದ್ದಪ್ಪ ಲಿಂಗಧಾಳ, ರಮೇಶ್ ಕೊಳೂರು, ರಾಮಚಂದ್ರ ಹಂಸನೂರು, ವಾಸುದೇವ ಹುಣಸೀಮರದ, ಆರ್.ಬಿ. ಕರ್ಜಗಿ, ಆರ್.ಎಸ್. ರಜಪೂತ, ಸರ್ಕಾರಿ ಪಾಲಿಟೆಕ್ನಿಕ್ ಪ್ರಾಚಾರ್ಯ ರಮೇಶ್ ಮಾವಿನಕಾಯಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ರಾಜಕುಮಾರ ಸೊಪ್ಪಡ್ಲ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

> "ಶ್ರೀ ಭಗವಾನ್ ಬುದ್ಧ ಜಯಂತಿಯನ್ನು ಅರ್ಥಪೂರ್ಣವಾಗಿ ಹಾಗೂ ಶಿಸ್ತಿನಿಂದ ಆಚರಿಸಲು ಎಲ್ಲಾ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು,"
>
> **– ಡಾ. ದುರಗೇಶ್ ಕೆ.ಆರ್,** ಅಪರ ಜಿಲ್ಲಾಧಿಕಾರಿ.

## ಕೈಗೆ ಬಂದ ಬೆಳೆ ಹಾಳು – ರೈತನ ಕಣ್ಣೀರಲ್ಲಿ ನಾಲ್ಕು ಲಕ್ಷ ನಷ್ಟ

# ಗಾಳಿಮಳೆಗೆ ನೆಲಕ್ಕುರುಳಿದ ಬಾಳೆ ತೋಟ



> "ಕೈಗೆ ಬಂದ ತುತ್ತು ಬಾಯಿಗೆ ಬಾರದಂತಾಗಿದೆ. ಸಾಲ ಮಾಡಿ ಬೆಳೆದ ಬೆಳೆ ಹಾಳಾಗಿ ಸುಮಾರು ನಾಲ್ಕು ಲಕ್ಷ ರೂಪಾಯಿ ನಷ್ಟವಾಗಿದೆ,"
>
> **– ಮೃತ್ಯುಂಜಯ ಧಡೇಸೂರಮಠ, ರೈತ.**

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಳೆದ ಮೂರು ದಿನಗಳಿಂದ ಸಂಜೆ ವೇಳೆ ಸುರಿಯುತ್ತಿರುವ ಗಾಳಿಮಳೆಗೆ ಹೋಬಳಿಯಾದ್ಯಂತ ಬಾಳೆ ಬೆಳೆ ಭಾರೀ ಹಾನಿಗೊಳಗಾಗಿದ್ದು, ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ.

ಮಂಗಳವಾರ ಸಂಜೆ ಸುರಿದ ಗಾಳಿ ಮಳೆಗೆ ಸಮೀಪದ ಜಕ್ಕಲಿ ಗ್ರಾಮದ ರೈತ ಮೃತ್ಯುಂಜಯ ಧಡೇಸೂರಮಠ ಅವರ ಎರಡು ಎಕರೆ ಜಮೀನಿನಲ್ಲಿ ಬೆಳೆದಿದ್ದ ಬಾಳೆ ತೋಟ ಸಂಪೂರ್ಣವಾಗಿ ನೆಲಕ್ಕುರುಳಿದೆ. ವರ್ಷಗಳ ಪರಿಶ್ರಮ ಮತ್ತು ಸಾಲ ಮಾಡಿಕೊಂಡು ಬೆಳೆದಿದ್ದ ಬೆಳೆ ಕಣ್ಣೆದುರೇ ಹಾಳಾಗಿರುವುದು ರೈತನಿಗೆ ಭಾರೀ ಆಘಾತ ಉಂಟುಮಾಡಿದೆ. ಗಾಳಿಮಳೆಯಿಂದ ಹಾನಿಗೊಳಗಾದ ಪ್ರದೇಶಗಳಲ್ಲಿ ಹಲವೆಡೆ ಇದೇ ಪರಿಸ್ಥಿತಿ ಕಂಡು ಬಂದಿದ್ದು, ಅನೇಕ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ತಕ್ಷಣ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಹಾನಿ ಪರಿಶೀಲನೆ ನಡೆಸಿ, ಸೂಕ್ತ ಪರಿಹಾರ ನೀಡಬೇಕೆಂದು ರೈತರು ಆಗ್ರಹಿಸಿದ್ದಾರೆ.

# ಭಕ್ತರ ಶ್ರದ್ಧೆಯಿಂದ ಕಲ್ಯಾಣ ಮಂಟಪ ನಿರ್ಮಾಣ: ಜಿ.ಎಸ್. ಪಾಟೀಲ

■ವಿಜಯಸಾಕ್ಷಿ ಸುದ್ದಿ, ರೋಣ

ಭಕ್ತರ ಶ್ರದ್ಧಾಭಕ್ತಿಯಿಂದಲೇ ಬೀರಲಿಂಗೇಶ್ವರ ಕಲ್ಯಾಣ ಮಂಟಪ ಹಾಗೂ ದ್ವಾರಬಾಗಿಲು ನಿರ್ಮಾಣ ಸಾಧ್ಯವಾಗಿದ್ದು, ಗ್ರಾಮದಲ್ಲಿ ಕಂಡುಬರುವ ಒಗ್ಗಟ್ಟು ಮತ್ತು ಸರ್ವಧರ್ಮ ಸೌಹಾರ್ದತೆ ಶ್ಲಾಘನೀಯವಾಗಿದೆ ಎಂದು ರೋಣ ಶಾಸಕ ಹಾಗೂ ಖನಿಜ ನಿಗಮ ಮಂಡಳಿಯ ಅಧ್ಯಕ್ಷ ಜಿ.ಎಸ್. ಪಾಟೀಲ ಹೇಳಿದರು.

ತಾಲೂಕಿನ ಮುಗಳಿ ಗ್ರಾಮದಲ್ಲಿ ನಡೆದ ಶ್ರೀ ಬೀರಲಿಂಗೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಕಲ್ಯಾಣ ಮಂಟಪ ಹಾಗೂ ದ್ವಾರಬಾಗಿಲು ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಮದ ಗುರುಹಿರಿಯರು ಒಗ್ಗಟ್ಟಿನಿಂದ ಜಾತ್ರೆಯನ್ನು ಆಚರಿಸುತ್ತಿರುವುದು ಎಲ್ಲರಲ್ಲೂ ಸದ್ಭಾವನೆ ಮೂಡಿಸುವಂತದ್ದು. ಈ ಏಕತೆ ಮುಂದುವರಿದು ಗ್ರಾಮಾಭಿವೃದ್ಧಿಗೆ ಕಾರಣವಾಗಲಿ ಎಂದು ಆಶಿಸಿದರು.


ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀಕಾಳಿಕಾದೇವಿ ದೇವಸ್ಥಾನದ ಟ್ರಸ್ಟ್ ಕಮಿಟಿಯ ಅಧ್ಯಕ್ಷ ಶ್ರೀಮಂತ ಮಲ್ಲಸರ್ಜ ಎಸ್. ದೇಸಾಯಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಬಸವರಾಜ ಉಸಲಕೊಪ್ಪದ, ಅಭಿಷೇಕ ನವಲಗುಂದ, ಯಲ್ಲಪ್ಪ ಕುರಿ, ಹನಮಂತಗೌಡ ಉಸಲಕೊಪ್ಪ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ದಾನಿಗಳಾದ ರಾಮಪ್ಪ ▶▶4ನೇ ಪುಟಕ್ಕೆ



## ತೆರವುಗೊಳಿಸಲು ಆಗ್ರಹಿಸಿ ಅನಿರ್ದಿಷ್ಟಾವಧಿ ಪ್ರತಿಭಟನೆ ಇಂದಿನಿಂದ

# ತೋಂಟದಾರ್ಯ ಜಾತ್ರೆಯಲ್ಲಿ ಅನಧಿಕೃತ ಅಂಗಡಿಗಳು!





■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಶ್ರೀ ಜಗದ್ಗುರು ತೋಂಟದಾರ್ಯ ಮಠದ ಮುಂಭಾಗದ ಸಾರ್ವಜನಿಕ ರಸ್ತೆಯಲ್ಲಿ ಅನಧಿಕೃತವಾಗಿ ಅಂಗಡಿ-ಮಳಿಗೆಗಳನ್ನು ಸ್ಥಾಪಿಸಿರುವುದರಿಂದ ಸಾರ್ವಜನಿಕರಿಗೆ ಸಂಚಾರಕ್ಕೆ ತೊಂದರೆ ಉಂಟಾಗುತ್ತಿದೆ ಎಂದು ಆರೋಪಿಸಿ, ಹಿಂದೂ ವೀರಶೈವ ಲಿಂಗಾಯತ ಯುವ ವೇದಿಕೆ ಅನಿರ್ದಿಷ್ಟಾವಧಿ ಪ್ರತಿಭಟನೆಗೆ ಕರೆ ನೀಡಿದೆ.

ಈ ಕುರಿತು ಪ್ರಕಟಣೆ ನೀಡಿರುವ ಸಂಘಟನೆಯ ಸಂಚಾಲಕ ಸತೀಶ ಕುಂಬಾರ ಅವರು, ಪ್ರತಿದಿನ ಸಾವಿರಾರು ಜನರು ಸಂಚರಿಸುವ ಈ ರಸ್ತೆ ಬ್ಯಾಂಕ್ ವ್ಯವಹಾರ ಸೇರಿದಂತೆ ವಿವಿಧ ಸಾರ್ವಜನಿಕ ಅಗತ್ಯಗಳಿಗೆ ಪ್ರಮುಖವಾಗಿದ್ದು, ಅನಧಿಕೃತ ಮಳಿಗೆಗಳ ಕಾರಣದಿಂದ ಸಂಚಾರ ದಟ್ಟಣೆ ಹಾಗೂ ಸಾರ್ವಜನಿಕರಿಗೆ ಅಸೌಕರ್ಯ ಉಂಟಾಗುತ್ತಿದೆ ಎಂದು ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಎಪ್ರಿಲ್ 23ರಿಂದ ಗದಗ ನಗರದ ಗಾಂಧೀ ವೃತ್ತದಲ್ಲಿ ಹಿಂದೂ ವೀರಶೈವ ಲಿಂಗಾಯತ ಯುವ ವೇದಿಕೆ ನೇತೃತ್ವದಲ್ಲಿ ವಿವಿಧ ದಲಿತ ಹಾಗೂ ಹಿಂದೂ ಪರ ಸಂಘಟನೆಗಳು ಮತ್ತು ಸ್ಥಳೀಯ ವ್ಯಾಪಾರಸ್ಥರೊಂದಿಗೆ ಅನಿರ್ದಿಷ್ಟಾವಧಿ ಪ್ರತಿಭಟನೆ ನಡೆಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

> "ಅನಧಿಕೃತವಾಗಿ ನಿರ್ಮಿಸಿರುವ ಅಂಗಡಿಗಳನ್ನು ತಕ್ಷಣ ತೆರವುಗೊಳಿಸಿ ಸಾರ್ವಜನಿಕರ ಸಂಚಾರಕ್ಕೆ ರಸ್ತೆ ಮುಕ್ತಗೊಳಿಸಬೇಕು," ಎಂದು ಸಂಘಟನೆ ಆಗ್ರಹಿಸಿದೆ.



ಹಗರಿಬೊಮ್ಮನಹಳ್ಳಿ: ಪಟ್ಟಣದಲ್ಲಿ ರಾಜ್ಯ ರಸ್ತೆ ಬೀದಿ ವ್ಯಾಪಾರಿಗಳ ಮಹಾಮಂಡಳಿ ವತಿಯಿಂದ ಬಸವ ಜಯಂತಿ ಅಂಗವಾಗಿ ಬಸವಣ್ಣನವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಪೂಜ್ಯ ಮಹಾಗುರುಗಳು, ಶಾಸಕ ಕೆ. ನೇಮಿರಾಜ ನಾಯ್ಕ, ವೈ. ಮಲ್ಲಿಕಾರ್ಜುನ್, ರಾಜ್ಯ ರಸ್ತೆ ಬೀದಿ ವ್ಯಾಪಾರಿಗಳ ಮಹಾಮಂಡಳಿಯ ಅಧ್ಯಕ್ಷ ಮಂಜುನಾಥ್, ಉಪಾಧ್ಯಕ್ಷ ರೋಶನ್, ಪದಾಧಿಕಾರಿಗಳಾದ ಹುಸೇನ್, ಎಂ.ಬಿ. ಕೊಟ್ರೇಶ್, ರವಿ, ಫಯಾಜ್, ಜಹಾಂಗೀರ್, ರತ್ನಮ್ಮ ಸೇರಿದಂತೆ ಇತರರು ಉಪಸ್ಥಿತರಿದ್ದರು.

**ಬಿಸಿಗಾಳಿ ತೀವ್ರತೆ ಹಿನ್ನೆಲೆ ಸಾರ್ವಜನಿಕರಿಗೆ ಆರೋಗ್ಯ ಇಲಾಖೆ ಸಲಹೆ**

# ಬೇಸಿಗೆಯಲ್ಲಿ ಆರೋಗ್ಯ ಕಾಪಾಡಲು ಮುಂಜಾಗ್ರತೆ ಅಗತ್ಯ



“ಬಿಸಿಗಾಳಿ ಹಾಗೂ ಹೆಚ್ಚಿನ ತಾಪಮಾನದಿಂದ ಆರೋಗ್ಯ ಸಮಸ್ಯೆಗಳು ಕಂಡುಬಂದಲ್ಲಿ ಸಮೀಪದ ಆರೋಗ್ಯ ಕೇಂದ್ರವನ್ನು ಸಂಪರ್ಕಿಸಬೇಕು ಅಥವಾ 108/102 ಸಹಾಯವಾಣಿ ಸಂಖ್ಯೆಗೆ ಕರೆ ಮಾಡಬೇಕು.”

**– ಆರೋಗ್ಯ ಇಲಾಖೆ**

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಬಿಸಿಲಿನ ತೀವ್ರತೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು, ವಿಶೇಷವಾಗಿ ಗರ್ಭಿಣಿಯರು, ಬಾಣಂತಿಯರು, ಮಕ್ಕಳು ಹಾಗೂ ವಯೋವೃದ್ಧರು ಆರೋಗ್ಯದ ರಕ್ಷಣೆಗೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಎಸ್. ನೀಲಗುಂದ ತಿಳಿಸಿದ್ದಾರೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಕಟಣೆಯಲ್ಲಿ ಬೇಸಿಗೆ ಕಾಲದಲ್ಲಿ ಪಾಲಿಸಬೇಕಾದ ಹಲವು ಸೂಚನೆಗಳನ್ನು ನೀಡಲಾಗಿದೆ.

*** ಅನುಸರಿಸಬೇಕಾದ ಕ್ರಮಗಳು:**

ಬೇಸಿಗೆಯಲ್ಲಿ ಹೆಚ್ಚು ಪ್ರಮಾಣದಲ್ಲಿ ನೀರು ಕುಡಿಯುವುದು ಅಗತ್ಯ. ಮಜ್ಜಿಗೆ, ಎಳನೀರು ಹಾಗೂ ಹಣ್ಣಿನ ರಸಗಳನ್ನು ಸೇವಿಸುವುದು ಉತ್ತಮ. ನೀರಿನ ಅಂಶ ಹೆಚ್ಚಿರುವ ಹಣ್ಣು ಮತ್ತು ತರಕಾರಿಗಳನ್ನು ಆಹಾರದಲ್ಲಿ ಸೇರಿಸಬೇಕು. ತೆಳುವಾದ ಬಣ್ಣದ ಹತ್ತಿ ಬಟ್ಟೆ ಧರಿಸಿ, ಗಾಳಿಯಾಡುವ ಪಾದರಕ್ಷೆ ಬಳಸಬೇಕು.

ಹೊರಗೆ ತೆರಳುವಾಗ ತಂಪು ಕನ್ನಡಕ, ಛತ್ರಿ ಅಥವಾ ಟವೆಲ್ ಬಳಸಿ ಬಿಸಿಲಿನಿಂದ ರಕ್ಷಿಸಿಕೊಳ್ಳಬೇಕು. ರೇಡಿಯೊ, ದೂರದರ್ಶನ ಹಾಗೂ ಪತ್ರಿಕೆಗಳಲ್ಲಿ ಪ್ರಕಟವಾಗುವ ಹೀಟ್‌ವೇವ್ ಮಾಹಿತಿ ಆಧರಿಸಿ ದಿನಚರಿಯನ್ನು ಯೋಜಿಸಿಕೊಳ್ಳುವುದು ಸೂಕ್ತ.

*** ಕೆಲಸದ ವೇಳೆಯಲ್ಲಿ ಎಚ್ಚರಿಕೆ:**

ಬಿಸಿಲಿನಲ್ಲಿ ಹೊರಗಡೆ ಕೆಲಸ ಮಾಡುವವರು ಬೆಳಗ್ಗೆ 11 ಗಂಟೆಯೊಳಗೆ ಹಾಗೂ ಸಂಜೆ 4 ಗಂಟೆಯ ನಂತರ ಕೆಲಸಗಳನ್ನು ನಿರ್ವಹಿಸುವುದು ಉತ್ತಮ. ಮಧ್ಯಾಹ್ನದ ವೇಳೆಯಲ್ಲಿ ಶ್ರಮದಾಯಕ ಕೆಲಸಗಳಿಂದ ದೂರವಿದ್ದು ವಿಶ್ರಾಂತಿ ಪಡೆಯಬೇಕು. ಬಿಸಿಲಿನಲ್ಲಿ ನಡೆದುಹೋಗುವಾಗ ಕಡ್ಡಾಯವಾಗಿ ಚಪ್ಪಲಿ ಧರಿಸಬೇಕು.

ಟೀ, ಕಾಫಿ, ಹೆಚ್ಚು ಸಕ್ಕರೆ ಇರುವ ಕಾರ್ಬೋನೇಟೆಡ್ ಪಾನೀಯಗಳು ಹಾಗೂ ಮದ್ಯಪಾನದಿಂದ ದೂರವಿರುವಂತೆ ಸಲಹೆ ನೀಡಲಾಗಿದೆ.

*** ತುರ್ತು ಪರಿಸ್ಥಿತಿಯಲ್ಲಿ ಕ್ರಮ:**

ವ್ಯಕ್ತಿ ತೊದಲು ಮಾತು ಆಡಿದರೆ ಅಥವಾ ಅಸ್ವಸ್ಥಗೊಂಡರೆ ಕೂಡಲೇ ನೆರಳಿನ ಸ್ಥಳಕ್ಕೆ ಕರೆದೊಯ್ದು ಮಲಗಿಸಿ, ಕಾಲುಗಳನ್ನು ಮೇಲಕ್ಕೆ ಎತ್ತಿ ವಿಶ್ರಾಂತಿ ಕೊಡಬೇಕು.

# ಗಾಳಿ-ಮಳೆಯ ಅಬ್ಬರಕ್ಕೆ ಜಕ್ಕಲಿ ತತ್ತರ!

**ವಿದ್ಯುತ್ ಕಂಬಗಳು ಉರುಳಿ ಕತ್ತಲಲ್ಲಿ ಗ್ರಾಮಗಳು – ಮನೆಗಳಿಗೆ ಹಾನಿ, ಜನಜೀವನ ಅಸ್ತವ್ಯಸ್ತ!**



“ಹಾನಿಗೊಳಗಾದವರಿಗೆ ಸರ್ಕಾರದಿಂದ ಅಗತ್ಯ ನೆರವು ಒದಗಿಸಲಾಗುವುದು,”

**– ನಾಗರಾಜ ಕೆ, ತಹಸೀಲ್ದಾರ್.**

**■ವಿಜಯಸಾಕ್ಷಿ ಸುದ್ದಿ, ರೋಣ**

ಮಂಗಳವಾರ ಸಂಜೆ ಸುರಿದ ಭಾರಿ ಗಾಳಿ-ಮಳೆಯ ಅಬ್ಬರಕ್ಕೆ ರೋಣ ತಾಲೂಕಿನ ಜಕ್ಕಲಿ ಗ್ರಾಮ ತತ್ತರಗೊಂಡಿದ್ದು, ಸುತ್ತಮುತ್ತಲಿನ ಅನೇಕ ಗ್ರಾಮಗಳಲ್ಲಿ ಜನಜೀವನ ಸಂಪೂರ್ಣ ಅಸ್ತವ್ಯಸ್ತವಾಗಿದೆ.

ಜೋರಾದ ಗಾಳಿಗೆ ನೂರಾರು ಗಿಡಮರಗಳು ಧರೆಗುರುಳಿದರೆ, 30ಕ್ಕೂ ಹೆಚ್ಚು ವಿದ್ಯುತ್ ಕಂಬಗಳು ನೆಲಕ್ಕುರುಳಿವೆ. ಜಕ್ಕಲಿ ಹಾಗೂ ಬೂದಿಹಾಳ ಗ್ರಾಮಗಳಲ್ಲಿ 20ಕ್ಕೂ ಹೆಚ್ಚು ಮನೆಗಳಿಗೆ ಹಾನಿಯಾಗಿದ್ದು, ಹಲವಾರು ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿವೆ. ಜಕ್ಕಲಿ, ಮಾರನಬಸರಿ, ಹಾಳಕೇರಿ, ನಿಡಗುಂದಿಕೊಪ್ಪ, ನಿಡಗುಂದಿ ಹಾಗೂ ಕಳಕಾಪೂರ ಗ್ರಾಮಗಳಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಂಡು ಜನರು ಇಡೀ ರಾತ್ರಿ ಕತ್ತಲಲ್ಲೇ ಕಳೆಯುವಂತಾಯಿತು.

ಮಧ್ಯಾಹ್ನ ಆರಂಭವಾದ ಮಳೆ ಸಂಜೆ ವೇಳೆಗೆ ರೌದ್ರ ಸ್ವರೂಪ ಪಡೆದಿದ್ದು, ಕೊತಬಾಳ, ಜಕ್ಕಲಿ, ಬೂದಿಹಾಳ ಸೇರಿದಂತೆ ಅನೇಕ ಗ್ರಾಮಗಳಲ್ಲಿ ಮರಗಳು ಉರುಳಿ ಬಿದ್ದಿವೆ. ಕೊತಬಾಳದಲ್ಲಿ ಮರವೊಂದು ವಿದ್ಯುತ್ ತಂತಿಗಳ ಮೇಲೆ ಬಿದ್ದ ಪರಿಣಾಮ ಕೆಲಕಾಲ ಭಯದ ವಾತಾವರಣ ನಿರ್ಮಾಣವಾಗಿತ್ತು.

ರೋಣ-ನರೇಗಲ್ಲ, ರೋಣ-ಸೂಡಿ, ಗಜೇಂದ್ರಗಡ ಹಾಗೂ ರೋಣ-ಬದಾಮಿ ಪ್ರಮುಖ ರಸ್ತೆಗಳಲ್ಲಿ ಮರಗಳು ಬಿದ್ದ ಪರಿಣಾಮ ಸಂಚಾರ ವ್ಯತ್ಯಯ ಉಂಟಾಯಿತು. ದೃಶ್ಯ ಸ್ಪಷ್ಟತೆ ಕಡಿಮೆಯಾದ ಕಾರಣ ಕೆಲ ವಾಹನ ಸವಾರರು ಮಧ್ಯರಸ್ತೆಯಲ್ಲೇ ವಾಹನ ನಿಲ್ಲಿಸಿದ ಘಟನೆಗಳೂ ವರದಿಯಾಗಿವೆ.

ರೋಣ ಪಟ್ಟಣದಲ್ಲಿ ಚರಂಡಿ ನೀರು ರಸ್ತೆಗೆ ಹರಿದ ಪರಿಣಾಮ ವ್ಯಾಪಾರಸ್ಥರು ತೊಂದರೆ ಅನುಭವಿಸಿದರು. ಬಸ್ ನಿಲ್ದಾಣದ ಬಳಿ ನಡೆಯುತ್ತಿದ್ದ ಸಿಸಿ ರಸ್ತೆ ಕಾಮಗಾರಿ ಸ್ಥಳದಲ್ಲಿ ನೀರು ತುಂಬಿಕೊಂಡಿದ್ದರಿಂದ ರಸ್ತೆ ಗುರುತಿಸಲಾಗದೆ ವ್ಯಕ್ತಿಯೊಬ್ಬ ಚರಂಡಿಗೆ ಬಿದ್ದಿದ್ದು, ಸ್ಥಳೀಯರು ತಕ್ಷಣ ರಕ್ಷಿಸಿದರು. ಕಾಮಗಾರಿ ವಿಳಂಬಕ್ಕೆ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಘಟನಾ ಸ್ಥಳಕ್ಕೆ ಭೇಟಿ ನೀಡಿದ ತಹಸೀಲ್ದಾರ್ ನಾಗರಾಜ ಕೆ, ಹೆಸ್ಕಾಂ ಹಾಗೂ ಗ್ರಾಮ ಪಂಚಾಯಿತಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಹೆಚ್ಚುವರಿ ಸಿಬ್ಬಂದಿ ನಿಯೋಜಿಸಿ ಶೀಘ್ರ ವಿದ್ಯುತ್ ಸಂಪರ್ಕ ಪುನಃಸ್ಥಾಪಿಸಲು ಸೂಚಿಸಿದರು. ಜೊತೆಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು. ಒಟ್ಟಾರೆ ಭಾರಿ ಗಾಳಿ-ಮಳೆಯ ಅಬ್ಬರಕ್ಕೆ ತಾಲೂಕಿನ ಜನರು ಆತಂಕಕ್ಕೊಳಗಾಗಿದ್ದು, ಸಾಮಾನ್ಯ ಜೀವನ ಸಂಪೂರ್ಣ ಅಸ್ತವ್ಯಸ್ತಗೊಂಡಿದೆ.

## ಶಂಕರಾಚಾರ್ಯರು ಸಮಾನತೆ-ಏಕತೆಯ ಸಂದೇಶ ಸಾರಿದ ಮಹಾನ್ ತತ್ವಜ್ಞ

**ತಹಸೀಲ್ದಾರ್ ಕಚೇರಿಯಲ್ಲಿ ಆದಿ ಶಂಕರಾಚಾರ್ಯರ ಜಯಂತಿ ಆಚರಣೆ**



“ಶಂಕರಾಚಾರ್ಯರಂತಹ ಮಹಾನ್ ವ್ಯಕ್ತಿತ್ವವನ್ನು ಒಂದೇ ಜಾತಿಗೆ ಸೀಮಿತಗೊಳಿಸದೆ, ಎಲ್ಲ ಧರ್ಮಗಳಿಗೂ ಅವರು ನೀಡಿದ ಕೊಡುಗೆಗಳನ್ನು ಗುರುತಿಸಬೇಕು.”

**– ಧನಂಜಯ ಎಂ. ತಹಸೀಲ್ದಾರ್**

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ಮಂಗಳವಾರ ಆದಿ ಶಂಕರಾಚಾರ್ಯರ ಜಯಂತ್ಯುತ್ಸವವನ್ನು ಅದ್ದೂರಿಯಾಗಿ ಆಚರಿಸಲಾಯಿತು. ಬ್ರಾಹ್ಮಣ ಸಮಾಜದವರು ಸೇರಿದಂತೆ ವಿವಿಧ ಸಮಾಜಗಳ ಮುಖಂಡರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ತಹಸೀಲ್ದಾರ್ ಧನಂಜಯ ಎಂ. ಅವರು ಶಂಕರಾಚಾರ್ಯರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಶಂಕರಾಚಾರ್ಯರು ಜಗತ್ತಿನ ಎಲ್ಲ ಸಮಾಜದವರನ್ನು ಒಂದೇ ತಟ್ಟೆಯಲ್ಲಿ ನೋಡಿದ ಮಹಾನ್ ತತ್ವಜ್ಞರಾಗಿದ್ದು, ಸಮಾನತೆಯ ಸಂದೇಶವನ್ನು ಸಾರಿದರು ಎಂದರು.

ತಮ್ಮ ಆಳವಾದ ಅಧ್ಯಯನದ ಮೂಲಕ ಅಲ್ಪ ವಯಸ್ಸಿನಲ್ಲಿಯೇ ಅಪಾರ ಜ್ಞಾನ ಸಂಪಾದಿಸಿದ ಶಂಕರಾಚಾರ್ಯರು ಭಾರತೀಯ ಆಧ್ಯಾತ್ಮಿಕ ಹಾಗೂ ತಾತ್ವಿಕ ಚಿಂತನೆಗೆ ಶಾಶ್ವತ ಪ್ರಭಾವ ಬೀರಿದ್ದಾರೆ ಎಂದು ಹೇಳಿದರು.

ತಾಲೂಕು ಬ್ರಾಹ್ಮಣ ಸಮಾಜದ ಅಧ್ಯಕ್ಷ ಕೃಷ್ಣ ಕುಲಕರ್ಣಿ ಮಾತನಾಡಿ, ಶಂಕರಾಚಾರ್ಯರನ್ನು ಭಾರತೀಯ ತತ್ವಶಾಸ್ತ್ರದ ಶ್ರೇಷ್ಠ ಚಿಂತಕರಲ್ಲಿ ಒಬ್ಬರೆಂದು ಪರಿಗಣಿಸಲಾಗುತ್ತದೆ. ಕೇರಳದ ಕಾಲಡಿಯಲ್ಲಿ ಜನಿಸಿದ ಅವರು ಅಲ್ಪಾಯುಷ್ಯದಲ್ಲಿಯೇ ಹಿಂದೂ ಧರ್ಮದ ಪುನರುತ್ಥಾನಕ್ಕೆ ಮಹತ್ವದ ಕೊಡುಗೆ ನೀಡಿದ್ದಾರೆ ಎಂದು ತಿಳಿಸಿದರು.

ಶಂಕರಾಚಾರ್ಯರು ಎಲ್ಲ ಜಾತಿ-ಧರ್ಮಗಳು ಒಂದೇ ಎಂಬ ಸಂದೇಶ ನೀಡಿದರೆ, ಜಗಜ್ಯೋತಿ ಬಸವಣ್ಣನವರು ಕೂಡ ಸಮಾನತೆಯ ಸಮಾಜ ನಿರ್ಮಾಣಕ್ಕೆ ಶ್ರಮಿಸಿದರು. ಇಂತಹ ಮಹನೀಯರ ಸಂದೇಶಗಳನ್ನು ಅಳವಡಿಸಿಕೊಂಡಲ್ಲಿ ಸಮಾಜದಲ್ಲಿ ಶಾಂತಿ ಹಾಗೂ ನೆಮ್ಮದಿ ನೆಲೆಸಲು ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಬ್ರಹ್ಮವೃಂದದ ಅಧ್ಯಕ್ಷ ಗೋಪಾಲ ಪಡ್ನೀಸ್, ಅರವಿಂದ ದೇಶಪಾಂಡೆ, ಬಿ.ಕೆ. ಕುಲಕರ್ಣಿ, ಧ್ರುವರಾಜ ಬೆಟಗೇರಿ, ಸಾಹುಕಾರ, ರಾಘವೇಂದ್ರ ಪೂಜಾರ, ದಿಗಂಬರ ಪೂಜಾರ, ಡಾ. ಪ್ರಸನ್ನ ಕುಲಕರ್ಣಿ, ಡಿ.ಪಿ. ಹೇಮಾದ್ರಿ, ಗುರುರಾಜ ಪಾಟೀಲ ಕುಲಕರ್ಣಿ, ಎಸ್.ಬಿ. ಅಣ್ಣಿಗೇರಿ, ಪ್ರಶಾಂತ ಕಿಮಾಯಿ, ರೇಣುಕಾ ಶಿರಹಟ್ಟಿ, ಪ್ರಶಾಂತ ಸನದಿ, ನಿರ್ಮಲಾ ಹಾಗೂ ಕಚೇರಿ ಸಿಬ್ಬಂದಿಗಳು, ಸಮಾಜ ಬಾಂಧವರು ಉಪಸ್ಥಿತರಿದ್ದರು.

## ಬಸವೇಶ್ವರರ ತತ್ವಗಳು ಸಮಾಜಕ್ಕೆ ದಾರಿದೀಪ

**ಮಾಸದ ಮಾತು ಕಾರ್ಯಕ್ರಮದಲ್ಲಿ ನಡೆದ ಬಸವ ಜಯಂತಿ ಆಚರಣೆಯಲ್ಲಿ ಎಸ್.ಎಫ್. ಆದಿ**

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

12ನೇ ಶತಮಾನದಲ್ಲಿ ಬದುಕಿದ್ದ ಜಗಜ್ಯೋತಿ ಬಸವೇಶ್ವರರು ಕೇವಲ ವ್ಯಕ್ತಿಯಾಗಿರದೆ ಸಮಾಜ ಚಿಂತನೆಯ ಶಕ್ತಿಯಾಗಿ ಬೆಳೆದು ನಿಂತ ಮಹಾನ್ ವ್ಯಕ್ತಿತ್ವವಾಗಿದ್ದು, ಅವರ ತತ್ವಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ ಎಂದು ಹಿರಿಯ ಸಾಹಿತಿ ಎಸ್. ಎಫ್. ಆದಿ ಹೇಳಿದರು.



“ಬಸವೇಶ್ವರರ ತತ್ವಗಳು ಮತ್ತು ವಿಚಾರಗಳು ಇಂದಿಗೂ ಇಡೀ ಸಮಾಜಕ್ಕೆ ಬೆಳಕು ನೀಡುವಂತಿವೆ.”

**– ಎಸ್.ಎಫ್. ಆದಿ,** ಸಾಹಿತಿ

ಪಟ್ಟಣದ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಪ್ರಧಾನ ಕಾರ್ಯದರ್ಶಿ ಎಂ.ಎಸ್. ಚಾಕಲಬ್ಬಿ ಅವರ ನಿವಾಸದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ‘ಮಾಸದ ಮಾತು’ ಕಾರ್ಯಕ್ರಮ ಸರಣಿಯ 33ನೇ ಕಾರ್ಯಕ್ರಮದ ಅಂಗವಾಗಿ ನಡೆದ ವಿಶ್ವಗುರು ಬಸವೇಶ್ವರ ಜಯಂತಿ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ ಅವರು ಮಾತನಾಡಿದರು.

ಜಗತ್ತಿಗೆ ಬೆಳಕು ನೀಡಿದ ಬಸವೇಶ್ವರರು 12ನೇ ಶತಮಾನದಲ್ಲಿಯೇ ಸಾಮಾಜಿಕ, ರಾಜಕೀಯ, ಧಾರ್ಮಿಕ ಹಾಗೂ ಕಾಯಕ ಕ್ರಾಂತಿಗೆ ನಾಂದಿ ಹಾಡಿದ ಅಪ್ರತಿಮ ಹೋರಾಟಗಾರ, ಸಮಾಜ ಸುಧಾರಕ ಹಾಗೂ ಧಾರ್ಮಿಕ ಗುರು ಎಂದು ವಿವರಿಸಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಪುರಸಭೆ ಮಾಜಿ ಸದಸ್ಯ ಪ್ರವೀಣ ಬಾಳಿಕಾಯಿ ಮಾತನಾಡಿ, ವಚನಗಳ ಮೂಲಕ ಬಸವಣ್ಣನವರು ಜಾತಿ, ವರ್ಗ, ಲಿಂಗ ಭೇದಗಳನ್ನು ತೊಡೆದು ಹಾಕಿ ಸಮಾನತೆಯ ಸಂದೇಶ ಸಾರಿದರು. ಎಲ್ಲ ಸಮುದಾಯದ ಜನರನ್ನು ಒಳಗೊಂಡ ಅನುಭವ ಮಂಟಪ ಸ್ಥಾಪಿಸಿದ್ದು, ಅದುವೇ ಜಗತ್ತಿನ ಮೊದಲ ಸಂಸತ್ತಾಗಿದೆ ಎಂದು ಹೇಳಿದರು. ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ವಿಶ್ರಾಂತ ದೈಹಿಕ ಪರಿವೀಕ್ಷಣಾಧಿಕಾರಿ ಆರ್.ಎನ್. ಪಂಚಭಾವಿ ಮಾತನಾಡಿ, ಕಾಯಕಯೋಗಿ ಬಸವಣ್ಣನವರ ಜಯಂತಿ ಆಚರಣೆ ಅರ್ಥಪೂರ್ಣವಾಗಿದೆ. 82 ವರ್ಷದ ಶಿವಪುತ್ರಪ್ಪ ಚಾಕಲಬ್ಬಿ ಇಂದಿಗೂ ಕಾಯಕದಲ್ಲಿಯೇ ದೇವರನ್ನು ಕಾಣುತ್ತಿರುವುದು ಸಮಾಜಕ್ಕೆ ಮಾದರಿಯಾಗಿದೆ ಎಂದು ಹೇಳಿದರು. ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಈಶ್ವರ್ ಮೇಡ್ಲೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಹಿರಿಯ ಕಾಯಕ ಜೀವಿ ಶಿವಪುತ್ರಪ್ಪ ಚಾಕಲಬ್ಬಿ, ಹಿರಿಯ ಸಾಹಿತಿ ಎಸ್.ಎಫ್. ಆದಿ ಹಾಗೂ ನಿವೃತ್ತ ಶಿಕ್ಷಕಿ ಎಸ್. ಎಂ. ಹಾಳದೋಟದ ಅವರನ್ನು ಸನ್ಮಾನಿಸಲಾಯಿತು.

ಶ್ರೀನಿಧಿ ಶಂಕರ ಶಿಳ್ಳಿನ ಮತ್ತು ವಿ.ಎಂ. ಹೂಗಾರ ಬಸವೇಶ್ವರರ ವಚನ ಗಾಯನ ಕಾರ್ಯಕ್ರಮ ನಡೆಸಿಕೊಟ್ಟರು. ವೇದಿಕೆಯಲ್ಲಿ ರೇಣುಕಾ ಚಾಕಲಬ್ಬಿ, ಕೆ.ಓ. ಹೂಲಿಕಟ್ಟಿ, ರಮೇಶ ಹಾಳದೋಟದ, ನಿಂಗಪ್ಪ ಕಲ್ಯಾಣಿ, ನಾಗಪ್ಪ ಅಂಗಡಿ, ವಿ.ಡಿ. ಪಾಟೀಲ, ಎಂ.ಎಸ್. ಕೊಟಗಿ ಉಪಸ್ಥಿತರಿದ್ದರು.

ಕ.ಸಾ.ಪ ಸಲಹಾ ಸಮಿತಿಯ ಎಸ್.ಬಿ. ಅಣ್ಣಿಗೇರಿ ಸ್ವಾಗತಿಸಿದರು. ಕಾರ್ಯದರ್ಶಿ ಮಂಜುನಾಥ ಚಾಕಲಬ್ಬಿ ವಂದಿಸಿದರು. ನಾಗರಾಜ ಮಜ್ಜಿಗುಡ್ಡ ಹಾಗೂ ಶಂಕರ ಶಿಳ್ಳಿನ ನಿರೂಪಿಸಿದರು.

## ಕೃಷಿ ಇಲಾಖೆ ಯೋಜನೆಗಳಿಂದ ರೈತರ ಉನ್ನತಿ ಸಾಧ್ಯ

**ಕೃಷಿ ಹೊಂಡಕ್ಕೆ ಬಾಗಿನ ಅರ್ಪಣೆ ಕಾರ್ಯಕ್ರಮದಲ್ಲಿ ಫಕೀರೇಶ್ವರ ಸ್ವಾಮೀಜಿ**



“ಒಂದು ಯೋಜನೆಯಿಂದಲೇ ರೈತರ ಬದುಕಿನಲ್ಲಿ ಮಹತ್ತರ ಬದಲಾವಣೆ ತರಲು ಸಾಧ್ಯ. ಇಂತಹ ಯೋಜನೆಗಳು ಎಲ್ಲ ರೈತರಿಗೆ ತಲುಪಿದರೆ ತಾಲೂಕು ಪ್ರಗತಿಪಥದಲ್ಲಿ ಸಾಗುತ್ತದೆ. ಯುವಕರು ಕೃಷಿಯತ್ತ ಮುಖ ಮಾಡಿ ರಿವಾರ್ಡ್ ಯೋಜನೆಯಂತಹ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಬೇಕು.”

**– ಕೆ.ಎಚ್. ಪಾಟೀಲ,** ಯುವ ಮುಖಂಡ.

**■ವಿಜಯಸಾಕ್ಷಿ ಸುದ್ದಿ, ಗದಗ**

ಕೃಷಿ ಇಲಾಖೆಯ ವಿವಿಧ ಯೋಜನೆಗಳನ್ನು ರೈತರು ಸದುಪಯೋಗಪಡಿಸಿಕೊಂಡಾಗ ಮಾತ್ರ ಅವರ ಆರ್ಥಿಕ ಉನ್ನತಿ ಸಾಧ್ಯವಾಗುವುದರ ಜೊತೆಗೆ ಯೋಜನೆಗಳೂ ಯಶಸ್ವಿಯಾಗುತ್ತವೆ ಎಂದು ಸೊರಟೂರಿನ ಓಂಕಾರೇಶ್ವರ ಮಠದ ಫಕೀರೇಶ್ವರ ಸ್ವಾಮೀಜಿಗಳು ಹೇಳಿದರು.

ತಾಲೂಕಿನ ಕಣವಿ ಗ್ರಾಮದ ಪ್ರಗತಿಪರ ರೈತ ಶರಣಪ್ಪಗೌಡ ಪಾಟೀಲ ಅವರ ತೋಟದಲ್ಲಿ ರಿವಾರ್ಡ್ ಯೋಜನೆಯಡಿ ನಿರ್ಮಿಸಲಾದ ಕೃಷಿ ಹೊಂಡಕ್ಕೆ ಬಾಗಿನ ಅರ್ಪಿಸುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜಗತ್ತಿನ ಎಲ್ಲ ಕಾಯಕಗಳಿಗಿಂತ ಒಕ್ಕಲುತನ ಶ್ರೇಷ್ಠವಾದದ್ದು. ರೈತನ ಹಿತ ಕಾಯುವುದು ಪ್ರತಿಯೊಬ್ಬರ ಜವಾಬ್ದಾರಿ ಎಂದು ಅವರು ಹೇಳಿದರು.

ಸಹಾಯಕ ಕೃಷಿ ನಿರ್ದೇಶಕ ಮಲ್ಲಯ್ಯ ಕೊರವನವರ ಮಾತನಾಡಿ, ರಿವಾರ್ಡ್ ಜಲಾನಯನ ಯೋಜನೆ ವೈಜ್ಞಾನಿಕವಾಗಿ ರೂಪಿತವಾಗಿದ್ದು ರೈತರ ಉನ್ನತಿಗೆ ಸಹಕಾರಿ. ಕೃಷಿ ಹೊಂಡದ ಜೊತೆಗೆ ತೋಟಗಾರಿಕೆ ಘಟಕದಡಿ ಪೇರಲ ಗಿಡಗಳನ್ನು ನೆಡಲಾಗಿದ್ದು, ರೈತರ ಆದಾಯ ದ್ವಿಗುಣಗೊಳಿಸುವುದು ಇಲಾಖೆಯ ಉದ್ದೇಶವಾಗಿದೆ ಎಂದರು.

ಈ ಸಂದರ್ಭದಲ್ಲಿ ಕೃಷಿ ಅಧಿಕಾರಿ ಎಫ್.ಸಿ. ಗುರಿಕಾರ, ತೋಟಗಾರಿಕೆ ಅಧಿಕಾರಿ ಶೈಲೇಂದ್ರ ಬಿರಾದಾರ, ಶಿದ್ದಪ್ಪ ಕೋರಿ, ಅಜ್ಜಣ್ಣ ಹುಗ್ಗೆನ್ನವರ, ಬಸವರಾಜ್ ಬಂದಕ್ಕನವರ, ಗಂಗಪ್ಪ ಗಡಾದ, ಪರಪ್ಪ ಕೊಳಿವಾಡ, ದೇವರೆಡ್ಡಿ ಅಗಸನಕೊಪ್ಪ ಸೇರಿದಂತೆ ಹಲವಾರು ರೈತರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ರಿವಾರ್ಡ್ ಯೋಜನೆಯಡಿ ನಿರ್ಮಿಸಲಾದ ಕೃಷಿ ಹೊಂಡಕ್ಕೆ ಬಾಗಿನ ಅರ್ಪಿಸಲಾಯಿತು. ನಂತರ ರೈತರೊಂದಿಗೆ ಚರ್ಚೆ ಹಾಗೂ ಸಂವಾದ ನಡೆಯಿತು.

# ಆದಿ ಶಂಕರಾಚಾರ್ಯರ ತತ್ವಗಳು ಇಂದಿಗೂ ಪ್ರಸ್ತುತ

**ಜಯಂತಿ ಅಂಗವಾಗಿ ಭಕ್ತಿಪೂರ್ವಕ ಆಚರಣೆ; ಅದ್ವೈತ ಸಂದೇಶಕ್ಕೆ ಒತ್ತು-ಜಿ. ಲಿಂಗು**



“ಅದ್ವೈತ ತತ್ವಗಳು ಸಮಾಜದಲ್ಲಿ ಏಕತೆ ಮತ್ತು ಸೌಹಾರ್ದತೆಯನ್ನು ಬಲಪಡಿಸುವಲ್ಲಿ ಮಹತ್ವಪೂರ್ಣ ಪಾತ್ರವಹಿಸುತ್ತಿವೆ. ಯುವಜನತೆ ಇಂತಹ ಮಹಾನ್ ಸಂತರು ನೀಡಿದ ಸಂದೇಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು,”

**–ಜಿ. ಸಂಗು.**

**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಆದಿ ಶಂಕರಾಚಾರ್ಯರ ತತ್ವಗಳು ಇಂದಿಗೂ ಸಮಾಜಕ್ಕೆ ಮಾರ್ಗದರ್ಶಕವಾಗಿದ್ದು, ಅವರ ಅದ್ವೈತ ಸಂದೇಶಗಳು ಏಕತೆ ಮತ್ತು ಸೌಹಾರ್ದತೆಯನ್ನು ಬಲಪಡಿಸುತ್ತಿವೆ ಎಂದು ಬ್ರಾಹ್ಮಣ ಸಮಾಜದ ಹಿರಿಯರಾದ ಜಿ. ಲಿಂಗು ಹೇಳಿದರು.

ತಾಲೂಕು ಪಟ್ಟಣದ ಮಿನಿ ವಿಧಾನಸೌಧದಲ್ಲಿ ಶ್ರೀ ಜಗದ್ಗುರು ಆದಿ ಶಂಕರಾಚಾರ್ಯರ ಜಯಂತಿಯನ್ನು ಸರಳ ಹಾಗೂ ಭಕ್ತಿಪೂರ್ವಕವಾಗಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ವಿವಿಧ ಗಣ್ಯರು, ಅಧಿಕಾರಿಗಳು ಹಾಗೂ ಸಮಾಜದ ಬಂಧುಗಳು ಭಾಗವಹಿಸಿ ಶಂಕರಾಚಾರ್ಯರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿದರು.

“ಭಾರತದಲ್ಲಿ ಆದಿ ಶಂಕರಾಚಾರ್ಯರ ಜಯಂತಿಯನ್ನು ‘ತತ್ವಜ್ಞಾನಿಗಳ ದಿನ’ವಾಗಿ ಆಚರಿಸಲಾಗುತ್ತದೆ. ಸನಾತನ ಧರ್ಮ ನಾಶದ ಅಂಚಿನಲ್ಲಿದ್ದಾಗ ಶಂಕರಾಚಾರ್ಯರು ಅವತರಿಸಿ ಧರ್ಮದ ಪುನರುತ್ಥಾನ ಮಾಡಿದ ಮಹಾನ್ ಪುರುಷರು,” ಎಂದು ಹೇಳಿದರು.

ಭಾರತೀಯ ಸಂಸ್ಕೃತಿ ಮತ್ತು ಆಧ್ಯಾತ್ಮಿಕತೆಯ ಪುನರುಜ್ಜೀವನಕ್ಕೆ ಆದಿ ಶಂಕರಾಚಾರ್ಯರು ನೀಡಿದ ಕೊಡುಗೆ ಅಪಾರವಾಗಿದೆ ಎಂದು ಅವರು ಹೇಳಿದರು.

ತಾಲೂಕು ಬ್ರಾಹ್ಮಣ ಸಂಘದ ಕಾರ್ಯದರ್ಶಿಗಳಾದ ಎಸ್. ಗಿರೀಶ್ ಹಾಗೂ ಎಸ್. ವೆಂಕಟೇಶ್ ಮಾತನಾಡಿ, ಕಾರ್ಯಕ್ರಮವು ಸರಳವಾಗಿ ನಡೆದರೂ ಶಂಕರಾಚಾರ್ಯರ ಮಹತ್ವವನ್ನು ಸ್ಮರಿಸುವ ಮೂಲಕ ಎಲ್ಲರಲ್ಲೂ ಆಧ್ಯಾತ್ಮಿಕ ಭಾವನೆ ಮೂಡಿಸಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ತಾಲೂಕು ಬ್ರಾಹ್ಮಣ ಸಮಾಜದ ಅಧ್ಯಕ್ಷ ಬದರಿ ನಾರಾಯಣ ಆಚಾರ್ಯ, ಪುರೋಹಿತರು ಹಾಗೂ ಸಂಘದ ಪದಾಧಿಕಾರಿಗಳು, ಸದಸ್ಯರು ಹಾಗೂ ಮುಖಂಡರಾದ ಗಣೇಶ ರಾವ್, ಸುರೇಶ್ ಜೋಶಿ, ಅರವಿಂದ ರಾವ್, ಜಿ. ರಾಘವೇಂದ್ರರಾವ್, ಜಗನ್ನಾಥ ಭಟ್, ಭೀಮೇಶ ಕೃಷ್ಣ, ಮಹಿಳಾ ಸಮಾಜದ ಅಧ್ಯಕ್ಷ ಸುಮಿತ್ರಾ ಸಾಗರ್, ಸವಿತಾ ಜೋಶಿ, ವನಜಾ ರಾವ್, ಸೀತಾ ಗಿರೀಶ್, ಸುನೀತಾ, ಭಾರತಿ ಭಟ್, ಜಲಜಾಕ್ಷಿ, ವಾಣಿ ಅರವಿಂದ, ಪದ್ಮ ರಾಧ, ಭಾರತೀ ಹಾಗೂ ಅಧಿಕಾರಿಗಳಾದ ನಾಗರಾಜ್ ಮಡಕಟ್ಟಿ ಉಪಸ್ಥಿತರಿದ್ದರು.

ತಾಲೂಕು ಬ್ರಾಹ್ಮಣ ಸಮಾಜದ ಪದಾಧಿಕಾರಿಗಳು ಹಾಗೂ ಸದಸ್ಯರು ದೊಡ್ಡ ಸಂಖ್ಯೆಯಲ್ಲಿ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ವಿದ್ಯಾರ್ಥಿಗಳಿಗಾಗಿ ಬಸ್ ನಿಲುಗಡೆ




■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಸ್ನಾತಕೋತ್ತರ ಅಧ್ಯಯನ ಕೇಂದ್ರದ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಕಾಲೇಜು ಎದುರು 'ಕೋರಿಕೆ' ಬಸ್ ನಿಲುಗಡೆ ನಾಮಫಲಕವನ್ನು ಸ್ಥಾಪಿಸಲಾಗಿದೆ.

ಗದಗ ವಿಭಾಗದ ಸಾರಿಗೆ ಸಂಸ್ಥೆಯ ಅನುಮತಿ ಪಡೆದು ನರಸಾಪುರ ಕ್ರಾಸ್, ನರಸಾಪುರ ಹಾಗೂ ನಾಗಸಮುದ್ರ ರಸ್ತೆ ಮಾರ್ಗದಲ್ಲಿ ಸಂಚರಿಸುವ ಬಸ್‌ಗಳಿಗೆ ಈ ನಿಲುಗಡೆ ಕಲ್ಪಿಸಲಾಗಿದೆ. ಇದರಿಂದ ಬಡ ಹಾಗೂ ಹಿಂದುಳಿದ ವಿದ್ಯಾರ್ಥಿಗಳಿಗೆ ಸಂಚಾರ ಸೌಲಭ್ಯ ಲಭ್ಯವಾಗಲಿದೆ.

ಈ ಹಿನ್ನೆಲೆಯಲ್ಲಿ ಕಾಲೇಜಿನ ಪ್ರಾಂಶುಪಾಲರು, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಸಂತೋಷ ವ್ಯಕ್ತಪಡಿಸಿದ್ದಾರೆ.

ಸೌಲಭ್ಯ ಒದಗಿಸಿದ ಗದಗ ಜಿಲ್ಲೆಯ ಸಾರಿಗೆ ಇಲಾಖೆಯ ವಿಭಾಗೀಯ ನಿಯಂತ್ರಣಾಧಿಕಾರಿ ಹಾಗೂ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (ವಾಕರಸಾ) ಗದಗ ವಿಭಾಗದ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಕಾಲೇಜು ವತಿಯಿಂದ ಅಭಿನಂದನೆ ಸಲ್ಲಿಸಲಾಗಿದೆ.

# ರಸಗೊಬ್ಬರ ಪೂರೈಕೆಯಲ್ಲಿ ಪಾರದರ್ಶಕತೆ ಇರಲಿ

**ಮುಂಗಾರು ಹಂಗಾಮಿಗೆ ಪೂರ್ವಸಿದ್ಧತೆ – ರೈತರಿಗೆ ಸಕಾಲಿಕ ಗೊಬ್ಬರ ಪೂರೈಕೆಗೇ ಆದ್ಯತೆ–ಡಿಸಿ ಶ್ರೀಧರ್**

■ವಿಜಯಸಾಕ್ಷಿ ಸುದ್ದಿ, ಗದಗ

ಮುಂಬರುವ ಮುಂಗಾರು ಹಂಗಾಮಿನಲ್ಲಿ ರೈತರಿಗೆ ಯಾವುದೇ ತೊಂದರೆಯಾಗದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಹಾಗೂ ರಸಗೊಬ್ಬರ ಪೂರೈಕೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ 2026–27ನೇ ಸಾಲಿನ ಜಿಲ್ಲಾ ಮಟ್ಟದ ಕೃಷಿ ಪರಿಕರಗಳ ಉಸ್ತುವಾರಿ ಮತ್ತು ಜಾಗೃತಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಹಕಾರಿ ಸಂಘಗಳ (PACS) ಮೂಲಕ ರಸಗೊಬ್ಬರ ಮಾರಾಟವನ್ನು ಚುರುಕುಗೊಳಿಸಬೇಕು. ಕಂಪನಿಗಳಿಂದ ಗೊಬ್ಬರ ಬಿಡುಗಡೆ–ಯಾದ ಕೂಡಲೇ ಅದು ಪಾಯಿಂಟ್ ಆಫ್ ಸೇಲ್ (POS) ಯಂತ್ರಗಳಲ್ಲಿ



ಸರಿಯಾಗಿ ದಾಖಲಾಗುತ್ತಿರುವುದನ್ನು ಕಟ್ಟುನಿಟ್ಟಾಗಿ ಮೇಲ್ವಿಚಾರಣೆ ಮಾಡಬೇಕು ಎಂದರು.

ತುರ್ತು ಸಂದರ್ಭಗಳಿಗಾಗಿ ಅಗತ್ಯ ಪ್ರಮಾಣದ ರಸಗೊಬ್ಬರವನ್ನು ಬಫರ್ ಸ್ಟಾಕ್ ಆಗಿ ಕಾಯ್ದಿರಿಸಿ, ಸಕಾಲದಲ್ಲಿ ವಿತರಣೆ ಮಾಡುವಂತೆ ಸೂಚಿಸಿದರು. ಡೀಲರ್‌ಗಳಿಗೆ ಗೊಬ್ಬರ ಹಂಚಿಕೆಯಲ್ಲಿ ಪಾರದರ್ಶಕತೆ ಇರಬೇಕು. ಕೆಲವರು ಗೊಬ್ಬರ ದಾಸ್ತಾನು ಮಾಡಿ ಕೃತಕ ಅಭಾವ ಸೃಷ್ಟಿಸುವುದನ್ನು ತಡೆಯಲು ಅಧಿಕಾರಿಗಳು ನಿಗಾವಹಿಸಬೇಕು ಎಂದು ಎಚ್ಚರಿಸಿದರು.

ರೈತರಿಗೆ ವಿಮಾ ಸೌಲಭ್ಯ ತಲುಪಿಸುವಲ್ಲಿ ಹೆಚ್ಚಿನ ಗಮನ ಹರಿಸಿ, ಬೆಳೆ ಹಾನಿ ಸಂದರ್ಭಗಳಲ್ಲಿ ಪರಿಹಾರ ಸಿಗುವಂತೆ ವಿಮಾ ಕಂಪನಿಗಳೊಂದಿಗೆ ಸಮನ್ವಯ ಸಾಧಿಸಬೇಕು ಎಂದರು.

ಕೇವಲ ಯೂರಿಯಾ ಅಥವಾ ಡಿಎಪಿ ಗೊಬ್ಬರಗಳ ಮೇಲೆ ಅವಲಂಬಿಸದೆ, ಮಣ್ಣಿನ ಗುಣಮಟ್ಟಕ್ಕೆ ಅನುಗುಣವಾಗಿ 'ಕಾಂಪ್ಲೆಕ್ಸ್' ಗೊಬ್ಬರ ಬಳಕೆ ಕುರಿತು ರೈತರಿಗೆ ಜಾಗೃತಿ ಮೂಡಿಸಬೇಕು. ಕ್ಷೇತ್ರ ಮಟ್ಟದ ಅಧಿಕಾರಿಗಳು ಅಂಕಿ–ಅಂಶಗಳಷ್ಟೇ ಅಲ್ಲ, ನೈಜ ಅನುಷ್ಠಾನಕ್ಕೂ ಒತ್ತು ನೀಡಬೇಕು ಎಂದು ಸೂಚಿಸಿದರು. ಯಾವುದೇ ಹಂತದಲ್ಲಿ ಭ್ರಷ್ಟಾಚಾರ ಅಥವಾ ನಿರ್ಲಕ್ಷ್ಯ ಕಂಡುಬಂದಲ್ಲಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದರು.

> "ರಸಗೊಬ್ಬರ ವಿತರಣೆಯಲ್ಲಿ ಯಾವುದೇ ಲೋಪವಿಲ್ಲದೆ ಪಾರದರ್ಶಕತೆ ಕಾಪಾಡಬೇಕು. ರೈತರಿಗೆ ಸಕಾಲದಲ್ಲಿ ಗೊಬ್ಬರ ಸಿಗುವಂತೆ ಕ್ರಮ ಕೈಗೊಳ್ಳುವುದು ಅತ್ಯಂತ ಅಗತ್ಯ."
>
> **–ಸಿ.ಎನ್. ಶ್ರೀಧರ್, ಡಿಸಿ**

ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕಿ ಶ್ರೀಮತಿ ಚೇತನಾ ಪಾಟೀಲ ಮಾಹಿತಿ ನೀಡಿ, ಎಪ್ರಿಲ್‌ನಿಂದ ಸೆಪ್ಟೆಂಬರ್‌ವರೆಗೆ ಜಿಲ್ಲೆಯ ಮುಂಗಾರು ಹಂಗಾಮಿಗೆ ಒಟ್ಟು 67,536 ಮೆಟ್ರಿಕ್ ಟನ್ ರಸಗೊಬ್ಬರ ಅಗತ್ಯವಿದ್ದು, ಈಗಾಗಲೇ 13,842 ಮೆಟ್ರಿಕ್ ಟನ್ ದಾಸ್ತಾನು ಮಾಡಲಾಗಿದೆ ಎಂದು ತಿಳಿಸಿದರು.

ಯೂರಿಯಾ ಗೊಬ್ಬರದ ಬೇಡಿಕೆ 28,531 ಮೆಟ್ರಿಕ್ ಟನ್ ಇದ್ದು, ಇದರಲ್ಲಿ 4,492 ಮೆಟ್ರಿಕ್ ಟನ್ ಈಗಾಗಲೇ ಲಭ್ಯವಿದೆ ಎಂದರು.

ಕೆ–ಕಿಸಾನ್ ಆಪ್ ಮೂಲಕ ಗೊಬ್ಬರ ಖರೀದಿ ವ್ಯವಸ್ಥೆ ಜಾರಿಯಲ್ಲಿದ್ದು, ರೈತರು ಎಫ್‌ಐಡಿ ಹೊಂದಿರುವುದು ಕಡ್ಡಾಯವಾಗಿದೆ. ರೈತರ ಜಮೀನು ಮತ್ತು ಬೆಳೆ ಅನುಗುಣವಾಗಿ ಅಗತ್ಯ ಪ್ರಮಾಣದ ಗೊಬ್ಬರವನ್ನು ಕೆ–ಕಿಸಾನ್ ತಂತ್ರಾಂಶದ ಮೂಲಕವೇ ವಿತರಿಸಲಾಗುತ್ತದೆ ಎಂದು ತಿಳಿಸಿದರು.

ಸಭೆಯಲ್ಲಿ ಡಿವೈಎಸ್‌ಪಿ ಮಹಾಂತೇಶ್ ಸಜ್ಜನ, ಉಪವಿಭಾಗಾಧಿಕಾರಿ ಗಂಗಪ್ಪ ಎಂ., ವಿವಿಧ ರಸಗೊಬ್ಬರ ಕಂಪನಿಗಳ ಪ್ರತಿನಿಧಿಗಳು ಹಾಗೂ ತಾಲೂಕು ಮಟ್ಟದ ಕೃಷಿ ಅಧಿಕಾರಿಗಳು ಉಪಸ್ಥಿತರಿದ್ದರು.

## ಶ್ರೀಮತಿ ಚಂಪಾ ಪಾಟೀಲಗೆ ರಾಷ್ಟ್ರೀಯ ಬಸವಶ್ರೀ ಪ್ರಶಸ್ತಿ



■ವಿಜಯಸಾಕ್ಷಿ ಸುದ್ದಿ, ಗದಗ

ಬಸವಣ್ಣನವರು 'ಕಾಯಕವೇ ಕೈಲಾಸ'ವೆಂದು ನುಡಿದಂತೆ ನಡೆದು ತೋರಿದ ಮಹಾತ್ಮರಾಗಿದ್ದು, ಅವರ ಹೆಸರಿನಲ್ಲಿ ಬಸವ ಜಯಂತಿ ಅಂಗವಾಗಿ ಕಾಯಕಯೋಗಿಗಳಿಗೆ ಪ್ರಶಸ್ತಿ ಪ್ರದಾನ ಮಾಡುತ್ತಿರುವುದು ಅಭಿನಂದನೀಯ ಎಂದು ಡಾ. ಕೆ.ಬಿ. ಪರಮೇಶ್ವರಪ್ಪ ಹೇಳಿದರು.

ದಾವಣಗೆರೆಯ ರೋಟರಿ ಸಭಾಂಗಣದಲ್ಲಿ ಬೆಂಗಳೂರಿನ ವಚನ ಟ್ರಸ್ಟ್ ಹಾಗೂ ಧಾರವಾಡದ ಚೇತನ್ ಫೌಂಡೇಶನ್ ಸಹಯೋಗದಲ್ಲಿ ಆಯೋಜಿಸಿದ್ದ ಬಸವ ಜಯಂತಿ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಸನ್ಮಾನಿಸಿ ಅವರು ಮಾತನಾಡಿದರು.

ಗದಗಿನ ಶಿರಹಟ್ಟಿಯ ಸರ್ಕಾರಿ ಪ್ರೌಢ ಶಾಲೆಯ ಸಹ ಶಿಕ್ಷಕಿ ಶ್ರೀಮತಿ ಚಂಪಾ ಪಾಟೀಲ ಅವರಿಗೆ ರಾಷ್ಟ್ರೀಯ ಬಸವಶ್ರೀ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಬಸವ ಜಯಂತಿ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆಗೈದ ಸಾಧಕರನ್ನು ಗುರುತಿಸಿ ರಾಜ್ಯ ಹಾಗೂ ರಾಷ್ಟ್ರಮಟ್ಟದ ಬಸವ ಚೇತನ ಮತ್ತು ಬಸವಶ್ರೀ ಪ್ರಶಸ್ತಿಗಳೊಂದಿಗೆ ಸ್ಮರಣಿಕೆ ನೀಡಿ ಸನ್ಮಾನಿಸಲಾಯಿತು.

ವಚನ ವೈಭವ ಕುರಿತು ಸಾಹಿತಿ ಬಿ. ರಂಗಸ್ವಾಮಿ ಉಪನ್ಯಾಸ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪರಮೇಶ್ವರಪ್ಪ ಸಿರಗೇರಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಕೂಡಲಗಿಯ ಎನ್.ಎಂ. ರವಿಕುಮಾರ, ಧಾರವಾಡದ ಎಲ್.ಐ. ಲಕ್ಕಮ್ಮನವರ ಹಾಗೂ ಬೆಂಗಳೂರಿನ ಸಾಹಿತಿ ಯಾಸ್ಮಿನ್ ಭಾನು ಬಿ. ಭಾಗವಹಿಸಿದ್ದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಚೇತನ್ ಫೌಂಡೇಶನ್ ಅಧ್ಯಕ್ಷ ಡಾ. ಚಂದ್ರಶೇಖರ ಮಾಡಲಗೇರಿ, ಬಸವ ಜಯಂತಿ ಅಂಗವಾಗಿ ಸಾಧಕರನ್ನು ಸನ್ಮಾನಿಸುವುದು ಸಂಸ್ಥೆಯ ಉದ್ದೇಶವಾಗಿದ್ದು, ಮುಂದಿನ ದಿನಗಳಲ್ಲಿ ಇಂತಹ ಕಾರ್ಯಕ್ರಮಗಳನ್ನು ಎಲ್ಲ ಜಿಲ್ಲೆಗಳಲ್ಲೂ ಹಮ್ಮಿಕೊಳ್ಳುವ ಯೋಜನೆ ಇದೆ ಎಂದು ಹೇಳಿದರು.

ಶರಣ ಸಂಸ್ಕೃತಿ ಪ್ರಚಾರ, ವಚನ ಸಾಹಿತ್ಯ ಅಧ್ಯಯನ ಹಾಗೂ ಕದಳಿ ಶ್ರೀ ಮಹಿಳಾ ವೇದಿಕೆಯ ಮೂಲಕ ಹಲವಾರು ರಚನಾತ್ಮಕ ಕಾರ್ಯಗಳನ್ನು ಕೈಗೊಂಡಿರುವ ಚಂಪಾ ಪಾಟೀಲ ಅವರು ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ಸಹಕಾರ ನೀಡುವುದರ ಜೊತೆಗೆ ವೃದ್ಧಾಶ್ರಮಗಳು ಮತ್ತು ವಿಶೇಷ ಚೇತನ ಶಾಲೆಗಳಿಗೆ ಸಹಾಯ ಮಾಡಿದ್ದಾರೆ. ಕಾಯಕ ಶರಣ ಸಂಸ್ಕೃತಿಯನ್ನು ಅಳವಡಿಸಿಕೊಂಡಿರುವ ಅವರ ಸೇವೆಯನ್ನು ಪರಿಗಣಿಸಿ ಈ ಪ್ರಶಸ್ತಿ ಪ್ರದಾನ ಮಾಡಲಾಗಿದೆ.

## ಸಮಾನತೆ–ಸೌಹಾರ್ದದ ಸಂದೇಶ ಹರಡಿದ ಬಸವಣ್ಣ


■ವಿಜಯಸಾಕ್ಷಿ ಸುದ್ದಿ, ಹುಲಕೋಟಿ

ವಿಶ್ವಗುರು ಬಸವಣ್ಣನವರ ಚಿಂತನೆಗಳು ಕಾಲಾತೀತವಾಗಿದ್ದು ಇಂದಿನ ಸಮಾಜಕ್ಕೂ ಸಮಾನವಾಗಿ ಪ್ರಸ್ತುತವಾಗಿವೆ ಎಂದು ಪ್ರಾಚಾರ್ಯೆ ಡಾ. ಸುಧಾ ಕೌಜಗೇರಿ ಹೇಳಿದರು.


ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಿದ್ದ ವಿಶ್ವಗುರು ಬಸವೇಶ್ವರ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬಸವಣ್ಣನವರ ತತ್ವಗಳು ಕೇವಲ ಒಂದು ಕಾಲಕ್ಕೆ ಅಥವಾ ಒಂದು ಪ್ರದೇಶಕ್ಕೆ ಸೀಮಿತವಲ್ಲ, ಅವು ಸರ್ವಕಾಲಕ್ಕೂ ಮಾರ್ಗದರ್ಶನ ನೀಡುವ ಶಕ್ತಿಯನ್ನು ಹೊಂದಿವೆ ಎಂದು ಹೇಳಿದರು.

ಬಸವಣ್ಣನವರ ಚಿಂತನೆಗಳಲ್ಲಿ ಅಸ್ತೇಯ, ದಯೆ, ಸಹಿಷ್ಣುತೆ, ದಾನ, ಸೇವೆ, ತ್ಯಾಗ, ಸಹಕಾರ, ಸಹಬಾಳ್ವೆ, ಸಮಾನತೆ, ಸತ್ಯ ಮತ್ತು ಅಹಿಂಸೆ ಮೊದಲಾದ ಮಾನವೀಯ ಮೌಲ್ಯಗಳು ಅಡಕವಾಗಿದ್ದು, ಇವು ಸಮಾಜದ ಬಲವರ್ಧನೆಗೆ ಕಾರಣವಾಗುತ್ತವೆ ಎಂದು ತಿಳಿಸಿದರು.

ಎನ್‌ಎಸ್‌ಎಸ್ ಘಟಕ ಸಂಯೋಜಕ ಹಾಗೂ ಇತಿಹಾಸ ಪ್ರಾಧ್ಯಾಪಕ ಡಾ. ಅಪ್ಪಣ್ಣ ಹಂಜೆ ಪ್ರಾಸ್ತಾವಿಕವಾಗಿ ಮಾತನಾಡಿ, ಬಸವಣ್ಣನವರು ವಚನಗಳ ಮೂಲಕ ಅಸಮಾನತೆ, ಅಂಧಶ್ರದ್ಧೆ ಹಾಗೂ ಅಕ್ರಮಗಳ ವಿರುದ್ಧ ಹೋರಾಟದ ಸಂದೇಶ ನೀಡಿದ್ದು, "ಕಾಯಕವೇ ಕೈಲಾಸ" ತತ್ವವನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಸಮಸಮಾಜ ನಿರ್ಮಾಣ ಸಾಧ್ಯವಾಗುತ್ತದೆ ಎಂದು ಹೇಳಿದರು. ಸಾಂಸ್ಕೃತಿಕ ವಿಭಾಗದ ಸಂಯೋಜಕ ರಮೇಶ್ ಹುಲಕುಂದ ಅವರು ಬಸವಣ್ಣನವರ ಜೀವನ ಹಾಗೂ ಸಂದೇಶ ಕುರಿತು ಉಪನ್ಯಾಸ ನೀಡಿದರು. ವಾಣಿಜ್ಯಶಾಸ್ತ್ರ ಪ್ರಾಧ್ಯಾಪಕ ಶಬ್ಬೀರಭಾಷಾ ಆಲೂರ ಸ್ವಾಗತಿಸಿದರು. ಕನ್ನಡ ಪ್ರಾಧ್ಯಾಪಕ ಭೀಮೇಶ್ ಕಾರ್ಯಕ್ರಮ ನಿರೂಪಿಸಿದರು. ಇತಿಹಾಸ ಪ್ರಾಧ್ಯಾಪಕಿ ರೋಹಿಣಿ ರಾಚಣ್ಣನವರ ವಂದಿಸಿದರು. ಕಾರ್ಯಕ್ರಮದಲ್ಲಿ ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



## ಖಗೋಳ ತಾರಾಲಯದಲ್ಲಿ ವಿಸ್ಮಯ ಬೇಸಿಗೆ ಶಿಬಿರ



■ವಿಜಯಸಾಕ್ಷಿ ಸುದ್ದಿ, ಗದಗ

ಬೇಸಿಗೆ ರಜೆಯನ್ನು ಸದುಪಯೋಗಪಡಿಸಿಕೊಳ್ಳಲು ಗದುಗಿನ ತಾರಾಲಯದಲ್ಲಿ ಆಯೋಜಿಸಿರುವ ಖಗೋಳ ವಿಸ್ಮಯ ಬೇಸಿಗೆ ಶಿಬಿರವು ವಿದ್ಯಾರ್ಥಿಗಳಿಗೆ ಆಕಾಶದ ಕೌತುಕಗಳನ್ನು ಅರಿಯುವ ಉತ್ತಮ ಅವಕಾಶವಾಗಿದೆ ಎಂದು ಸಂಪನ್ಮೂಲ ವ್ಯಕ್ತಿ ಕವಿತಾ ದಂಡಿನ ಹೇಳಿದರು.

ಬೆಟಗೇರಿಯ ಖಗೋಳ ತಾರಾಲಯದಲ್ಲಿ ಶಾಲಾ ಶಿಕ್ಷಣ ಇಲಾಖೆ ಹಾಗೂ ಭಾರತೀಯ ವೈದ್ಯಕೀಯ ಸಂಸ್ಥೆ (ಐಎಂಎ) ಗದಗ ಸಂಯುಕ್ತ ಆಶ್ರಯದಲ್ಲಿ ನಡೆಯುತ್ತಿರುವ ಶಿಬಿರದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಕುತೂಹಲ ಮತ್ತು ಅನ್ವೇಷಣೆಯ ಮನೋಭಾವ ವಿದ್ಯಾರ್ಥಿಗಳಿಗೆ ವೈಜ್ಞಾನಿಕ ಅಧ್ಯಯನಕ್ಕೆ ದಾರಿ ತೋರಿಸುತ್ತದೆ ಎಂದು ತಿಳಿಸಿದರು.

ತಾರಾಲಯ ವೀಕ್ಷಣೆ ಮೂಲಕ ಆಕಾಶದ ರಹಸ್ಯಗಳನ್ನು ಅರಿಯುವ ಜೊತೆಗೆ ಪ್ರಾಣಿ ಸಂಗ್ರಹಾಲಯಕ್ಕೂ ಭೇಟಿ ನೀಡುವ ಅವಕಾಶ ವಿದ್ಯಾರ್ಥಿಗಳಿಗೆ ನೀಡಲಾಗಿದ್ದು, ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಅವರು ಸಲಹೆ ನೀಡಿದರು.

ಕೋಟುಮಚಗಿ ಸರ್ಕಾರಿ ಪ್ರೌಢಶಾಲೆಯ ವಿಜ್ಞಾನ ಶಿಕ್ಷಕಿ ಭುವನೇಶ್ವರಿ ಪೋಲೀಸ್‌ಪಾಟೀಲ ಮಾತನಾಡಿ, ವಿಜ್ಞಾನವು ನಿಖರತೆಯ ಮೇಲೆ ಆಧಾರಿತವಾಗಿದ್ದು ಆಕಾಶದಲ್ಲಿನ ಅನೇಕ ಕುತೂಹಲಗಳಿಗೆ ತಾರಾಲಯದಲ್ಲಿ ಉತ್ತರ ದೊರೆಯುತ್ತದೆ ಎಂದು ಹೇಳಿದರು. ವಿದ್ಯಾರ್ಥಿಗಳು ಆಸಕ್ತಿಯಿಂದ ಭಾಗವಹಿಸುತ್ತಿರುವುದು ಸಂತಸದ ಸಂಗತಿ ಎಂದರು.

ಶಿಕ್ಷಣ ಇಲಾಖೆಯ ಸಂಪನ್ಮೂಲ ವ್ಯಕ್ತಿಗಳಾದ ಎಂ.ಎಚ್. ಸವದತ್ತಿ, ಮಹ್ಮದ್‌ಶಫಿ ಯರಗುಡಿ, ಶ್ಯಾಮ್ ಲಾಂಡೆ, ಬಸವರಾಜ ಕಡಿವಾಲ ಸೇರಿದಂತೆ ವಿವಿಧ ಶಾಲೆಗಳ ವಿದ್ಯಾರ್ಥಿಗಳು ಶಿಬಿರದಲ್ಲಿ ಭಾಗವಹಿಸಿದ್ದರು.

## ರೇಣವ್ವ ಹಾದಿಮನಿ ಅವರಿಗೆ ರಾಷ್ಟ್ರೀಯ ಬಸವಶ್ರೀ ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಗಂಗಿಮಡಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕಿ ರೇಣವ್ವ ಹಾದಿಮನಿ ಅವರು ರಾಷ್ಟ್ರೀಯ ಬಸವಶ್ರೀ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಬೆಂಗಳೂರು ವಚನ ಟ್ರಸ್ಟ್ ಹಾಗೂ ಧಾರವಾಡದ ಚೇತನ್ ಫೌಂಡೇಶನ್ ಸಹಯೋಗದಲ್ಲಿ ದಾವಣಗೆರೆಯ ರೋಟರಿ ಸಭಾಂಗಣದಲ್ಲಿ ಆಯೋಜಿಸಿದ್ದ ವರ್ಣರಂಜಿತ ಸಮಾರಂಭದಲ್ಲಿ ಗಣ್ಯರು ಪ್ರಶಸ್ತಿ ಪ್ರದಾನ ಮಾಡಿದರು.

ಬಸವ ಜಯಂತಿ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿದ ಸಾಧಕರನ್ನು ಗುರುತಿಸಿ ರಾಜ್ಯ ಹಾಗೂ ರಾಷ್ಟ್ರ ಮಟ್ಟದ ಬಸವ ಚೇತನ ಹಾಗೂ ಬಸವಶ್ರೀ ಪ್ರಶಸ್ತಿಗಳೊಂದಿಗೆ ಸ್ಮರಣಿಕೆ ನೀಡಿ ಗೌರವಿಸಲಾಯಿತು.

ದಾವಣಗೆರೆ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ಕೆ.ಬಿ. ಪರಮೇಶ್ವರಪ್ಪ ಅವರು ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿದರು. ವಚನ ವೈಭವ ಕುರಿತು ಸಾಹಿತಿ ಬಿ. ರಂಗಸ್ವಾಮಿ ಉಪನ್ಯಾಸ ನೀಡಿದರು. ಪರಮೇಶ್ವರಪ್ಪ ಸಿರಗೇರಿ ಅವರು ಅಧ್ಯಕ್ಷತೆ ವಹಿಸಿದ್ದರು. ಧಾರವಾಡದ ಚೇತನ್ ಫೌಂಡೇಶನ್ ಅಧ್ಯಕ್ಷ ಡಾ. ಚಂದ್ರಶೇಖರ ಮಾಡಲಗೇರಿ ಮಾತನಾಡಿ, ಬಸವ ಜಯಂತಿಯ ಅಂಗವಾಗಿ ಸಾಧಕರನ್ನು ಗೌರವಿಸುವುದು ಸಂಸ್ಥೆಯ ಉದ್ದೇಶವಾಗಿದ್ದು ಮುಂದಿನ ದಿನಗಳಲ್ಲಿ ಇಂತಹ ಕಾರ್ಯಕ್ರಮಗಳನ್ನು ಎಲ್ಲ ಜಿಲ್ಲೆಗಳಲ್ಲೂ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಶಾಲೆ ಬಿಟ್ಟ ಮಕ್ಕಳನ್ನು ಮರಳಿ ಶಾಲೆಗೆ ಕರೆತರುವುದು, ವಿಶೇಷ ಮಕ್ಕಳ ಬಗ್ಗೆ ಕಾಳಜಿ ವಹಿಸುವುದು ಹಾಗೂ ನಲಿಕಲಿ ತರಗತಿಗಳ ಕ್ರಿಯಾತ್ಮಕ ಬೋಧನೆಗೆ ನೀಡಿದ ಕೊಡುಗೆಗಾಗಿ ರೇಣವ್ವ ಹಾದಿಮನಿ ಅವರಿಗೆ ಈ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಮುಖ್ಯ ಅತಿಥಿಗಳಾಗಿ ಕೂಡಲಗಿಯ ಎನ್.ಎಂ. ರವಿಕುಮಾರ, ಧಾರವಾಡದ ಎಲ್.ಐ. ಲಕ್ಕಮ್ಮನವರ ಹಾಗೂ ಬೆಂಗಳೂರಿನ ಸಾಹಿತಿ ಯಾಸ್ಮಿನ್‌ಭಾನು ಬಿ. ಉಪಸ್ಥಿತರಿದ್ದರು.




## ಯುವ ಶಕ್ತಿಗಳು ಜೆಸಿಐಂತಹ ಸಂಘಟನೆಗಳಲ್ಲಿ ತೊಡಗಿಸಿಕೊಳ್ಳಬೇಕು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಯುವ ಸಮುದಾಯದ ಸಾಮರ್ಥ್ಯವನ್ನು ದೇಶದ ಅಭಿವೃದ್ಧಿಗೆ ಬಳಸುವ ಉದ್ದೇಶದಿಂದ ಜೆಸಿಐ ಸಂಸ್ಥೆ ವಿಶ್ವವ್ಯಾಪಿಯಾಗಿ ಯುವಕರನ್ನು ಸದೃಢಗೊಳಿಸುವ ಕೆಲಸ ಮಾಡುತ್ತಿದ್ದು, ಯುವ ಶಕ್ತಿಗಳು ಇಂತಹ ಸಂಘಟನೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು ಎಂದು ಜೆಸಿಐ ವಲಯ ಉಪ ನಿರ್ದೇಶಕ ಅಮೃತ ಛತ್ರಿಕೆ ಹೇಳಿದರು.

ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಜೆಸಿಐ ಪುಲಿಗೇರಿ ಪ್ರಭೆ ವತಿಯಿಂದ ರವಿವಾರ ಆಯೋಜಿಸಿದ್ದ ಓರಿಯಂಟೇಷನ್ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜೆಸಿಐ ಸಂಸ್ಥೆ ವ್ಯಕ್ತಿತ್ವ ವಿಕಸನ, ಶಿಕ್ಷಣ, ಆರೋಗ್ಯ, ಸಮಾಜಸೇವೆ, ಮಹಿಳೆಯರು ಹಾಗೂ ಮಕ್ಕಳ ಕಲ್ಯಾಣ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಉತ್ತಮ ಸಮಾಜ ನಿರ್ಮಾಣಕ್ಕೆ ಶ್ರಮಿಸುತ್ತಿದೆ. ಯುವಕರಲ್ಲಿ ನಾಯಕತ್ವದ ಗುಣಗಳನ್ನು ಬೆಳೆಸುವಲ್ಲಿ ಜೆಸಿಐ ಪ್ರಮುಖ ಪಾತ್ರವಹಿಸುತ್ತದೆ. ಆದ್ದರಿಂದ ಯುವಕರು ಜೆಸಿಐ ಮೂಲಕ ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸವಣೂರಿನ ಪತ್ರಕರ್ತ ಆನಂದ ಮತ್ತಿಗಟ್ಟಿ ಮಾತನಾಡಿ, ತರಬೇತಿ ಮೂಲಕ ಯುವಪೀಳಿಗೆಯಲ್ಲಿ ನಾಯಕತ್ವದ ಗುಣಗಳನ್ನು ಬೆಳೆಸಿ ಜೆಸಿಐ ಸಂಸ್ಥೆ ಸಮಾಜಕ್ಕೆ ಮಹತ್ವದ ಕೊಡುಗೆ ನೀಡುತ್ತಿದೆ. ಯುವಕರು ದೇಶದ ಆಸ್ತಿಯಾಗಿದ್ದು, ಅವರಿಗೆ ಸೂಕ್ತ ಮಾರ್ಗದರ್ಶನ ಹಾಗೂ ತರಬೇತಿ ನೀಡುವುದು ಅಗತ್ಯ ಎಂದು ಹೇಳಿದರು.

ಜೆಸಿಐ ಪುಲಿಗೇರಿ ಪ್ರಭೆ ಲಕ್ಷ್ಮೇಶ್ವರ ಘಟಕದ ಅಧ್ಯಕ್ಷೆ ಲಕ್ಷ್ಮೀ ಹಂಗನಕಟ್ಟಿ ಮಾತನಾಡಿ, ಮುಂದಿನ ದಿನಗಳಲ್ಲಿ ಘಟಕದಿಂದ ಹಲವು ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬಸವರಾಜ ಅರಳಿ, ರಾಘವೇಂದ್ರ ಪೂಜಾರ, ಶಿವಕುಮಾರ ಗಡ್ಡಿಮಠ, ಪ್ರಕಾಶ್ ಕುಂಬಾರ, ಅಭಿಷೇಕ ಉಮಚಗಿ ಸೇರಿದಂತೆ ಜೆಸಿಐ ಸದಸ್ಯರು ಉಪಸ್ಥಿತರಿದ್ದರು.

## ಶ್ರೀ ಸಾಯಿ ಹನುಮಾನ ಆರೋಗ್ಯ ದಾಸೋಹ ಕೇಂದ್ರ ಉದ್ಘಾಟನೆ




■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕಳಸಾಪುರ ರಸ್ತೆಯ ಶ್ರೀ ಸಾಯಿ ಬಾಪೂಜಿ ನಗರದಲ್ಲಿ ಡಾ. ಪಾಂಡುರಂಗಸಾ ಎಚ್. ಕಬಾಡಿ ಅವರ ನಿವೇಶನದಲ್ಲಿ ಸೋಮವಾರ ಶ್ರೀ ಸಾಯಿ ಹನುಮಾನ ಆರೋಗ್ಯ ದಾಸೋಹ ಕೇಂದ್ರವನ್ನು ಕದಳಿವನ ಮಠದ ಮಾತೋಶ್ರೀ ಅಕ್ಕಮಹಾದೇವಿ ಅಮ್ಮನವರು ಜ್ಯೋತಿ ಬೆಳಗಿಸುವುದರ ಮೂಲಕ ಉದ್ಘಾಟಿಸಿದರು.

ಉದ್ಘಾಟನಾ ಸಂದರ್ಭದಲ್ಲಿ ಮಾತನಾಡಿದ ಡಾ. ಪಾಂಡುರಂಗಸಾ ಎಚ್. ಕಬಾಡಿ ಅವರು, ತಮ್ಮ ಟ್ರಸ್ಟ್‌ನ ಮುಖ್ಯ ಉದ್ದೇಶ ಪಂಚವಿಧ ದಾಸೋಹಗಳಾದ ಆರೋಗ್ಯ, ಶಿಕ್ಷಣ, ಜ್ಞಾನ, ಧರ್ಮ ಮತ್ತು ದೇಶಸೇವೆ ಎಂಬುದಾಗಿ ತಿಳಿಸಿದರು. ಈ ಕಾರ್ಯಗಳ ಮೂಲಕ ಜನರಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವುದರ ಜೊತೆಗೆ, ಇಂದಿನಿಂದ ರೋಗಿಗಳಿಗೆ ಉಚಿತ ಚಿಕಿತ್ಸೆ ನೀಡಲಾಗುವುದು ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ರಾಜ್ಯ ಪ್ರಶಸ್ತಿ ವಿಜೇತೆ ಶಿಕ್ಷಕಿ ರತ್ನಾ ಬದಿ ಅವರು, ಮಕ್ಕಳ ಮಾನಸಿಕ ಆರೋಗ್ಯ ಮತ್ತು ಸಮಗ್ರ ಸ್ವಾಸ್ಥ್ಯವನ್ನು ಗಮನದಲ್ಲಿಟ್ಟುಕೊಂಡು ವಿಶೇಷ ಕಾರ್ಯಕ್ರಮಗಳನ್ನು ರೂಪಿಸುವ ಅಗತ್ಯವಿದೆ ಎಂದು ಸಲಹೆ ನೀಡಿದರು.

ಅಕ್ಕಮಹಾದೇವಿ ಅಮ್ಮನವರು ಮಾತನಾಡಿ, ಬಸವಣ್ಣನವರು ಜಗತ್ತಿಗೆ ನೀಡಿದ ಅನ್ನದಾಸೋಹ ಮತ್ತು ಜ್ಞಾನ ದಾಸೋಹದ ಪರಂಪರೆಯನ್ನು ಮುಂದುವರೆಸುತ್ತಿರುವ ಡಾ. ಕಬಾಡಿ ದಂಪತಿಗಳ ಸೇವಾ ಮನೋಭಾವ ಶ್ಲಾಘನೀಯವಾಗಿದೆ ಎಂದು ಹೇಳಿದರು. ಯಾವುದೇ ಸೇವಾ ಕಾರ್ಯ ಯಶಸ್ವಿಯಾಗಲು ಪತಿಯ ನಿರ್ಧಾರಕ್ಕೆ ಪತ್ನಿಯ ಸಹಕಾರ ಮುಖ್ಯವಾಗಿದ್ದು, ಡಾ. ಕಬಾಡಿ ಹಾಗೂ ಶ್ರೀಮತಿ ಸ್ನೇಹಲತಾ ಜರತಾರಕರ ಅವರ ದಾಂಪತ್ಯ ಜೀವನ ಸಮಾಜಕ್ಕೆ ಮಾದರಿಯಾಗಿದೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಕೇಂದ್ರದ ಲೋಕಾರ್ಪಣೆಯ ಅಂಗವಾಗಿ 25ಕ್ಕೂ ಹೆಚ್ಚು ಜನರಿಗೆ ಉಚಿತ ರಕ್ತದ ಒತ್ತಡ (ಬಿಪಿ) ಮತ್ತು ಸಕ್ಕರೆ ಕಾಯಿಲೆ ತಪಾಸಣೆ ನಡೆಸಿ, ಅಗತ್ಯ ವೈದ್ಯಕೀಯ ಸಲಹೆ ನೀಡಲಾಯಿತು. ಅಕ್ಷಯ ತೃತೀಯದ ಅಂಗವಾಗಿ ಐದು ಫಲಾನುಭವಿಗಳಿಗೆ ಅಕ್ಕಿ ಹಾಗೂ ಸಿಹಿ ಬತ್ತಾಸೆ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಶ್ರೀಮತಿ ರತ್ನಾ ಯಳಮಲಿ, ಅಂಜುಮನ್ ಸಂಸ್ಥೆಯ ಉಪಾಧ್ಯಕ್ಷ ಆರ್.ಎಂ. ಸೋಮಪುರ, ನ್ಯಾಯವಾದಿ ವೀರೇಶ್ ಬೆನ್ನಾಳ, ಮಾಜಿ ನಗರಸಭೆ ಅಧ್ಯಕ್ಷ ಪ್ರಕಾಶ್ ಬಾಕಳೆ ಸೇರಿದಂತೆ ಹಲವರು ಶುಭಾಶಯ ಕೋರಿದರು. ಶ್ರೀಮತಿ ಶೃತಿ ಹಬೀಬ ಪ್ರಾರ್ಥನೆ ನೆರವೇರಿಸಿದರು. ಪ್ರಕಾಶ್ ಬೊಮ್ಮನಳ್ಳಿ ವಂದಿಸಿದರು. ಸಾಯಿ ಬಾಪೂಜಿ ನಗರದ ಗುರು ಹಿರಿಯರು ಉಪಸ್ಥಿತರಿದ್ದರು.

ಲೋಕಪ್ಪನಹೊಲ ಗ್ರಾಮದಲ್ಲಿ ನೂರಾರು ಮಹಿಳೆಯರ ಸಂಕಷ್ಟ – ಸಹಾಯಕ್ಕಾಗಿ ಮನವಿ

# ಆಸರೆ ಕಳೆದುಕೊಂಡ ಬದುಕು– ಔಷಧಿಗೂ ಹಾತೊರೆಯುವ ಒಂಟಿ ಮಹಿಳೆಯರು!



"ಬದುಕು ಸಾಗಿಸುವುದೇ ಕಷ್ಟವಾಗಿರುವಾಗ ಔಷಧೋಪಚಾರಕ್ಕೆ ಹಣವೇ ಇಲ್ಲದ ಪರಿಸ್ಥಿತಿ ಎದುರಾಗಿದೆ," ಎಂಬುದು ಈ ಮಹಿಳೆಯರ ಮನದಾಳದ ನೋವು.

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಲೋಕಪ್ಪನಹೊಲ ಗ್ರಾಮದಲ್ಲಿ ಆಸರೆ ಕಳೆದುಕೊಂಡು ಅನಾರೋಗ್ಯದಿಂದ ಬಳಲುತ್ತಿರುವ ನೂರಾರು ಒಂಟಿ ಮಹಿಳೆಯರ ಜೀವನ ಇಂದು ಕಠಿಣ ಪರಿಸ್ಥಿತಿಯಲ್ಲಿ ಸಾಗುತ್ತಿದೆ. ಗಂಡನನ್ನು ಕಳೆದುಕೊಂಡ ನಂತರ ಆರ್ಥಿಕ ಸಂಕಷ್ಟ ಮಾತ್ರವಲ್ಲದೆ, ಸಾಮಾಜಿಕ ತಾರತಮ್ಯ ಮತ್ತು ತಾತ್ಸಾರವನ್ನೂ ಎದುರಿಸುತ್ತಿರುವ ಈ ಮಹಿಳೆಯರು ಬದುಕಿನ ಪ್ರತಿದಿನವನ್ನೂ ಹೋರಾಟವನ್ನಾಗಿ ಮಾಡಿಕೊಂಡಿದ್ದಾರೆ.

ಗ್ರಾಮದಲ್ಲಿ ಅನೇಕ ಮಹಿಳೆಯರು ವಯಸ್ಸಿನ ಕಾರಣದಿಂದಲೂ, ಶುಗರ್, ಮೊಣಕಾಲು ನೋವು ಸೇರಿದಂತೆ ಹಲವು ಕಾಯಿಲೆಗಳಿಂದ ಬಳಲುತ್ತಿದ್ದಾರೆ. ದಿನಗೂಲಿ ಕೆಲಸಕ್ಕೂ ಹೋಗಲು ಸಾಧ್ಯವಾಗದ ಸ್ಥಿತಿಯಲ್ಲಿರುವ ಕೆಲವರು ಔಷಧಿ ಖರೀದಿಸಲು ಸಹ ಸಾಧ್ಯವಾಗದೇ ಸಂಕಷ್ಟ ಅನುಭವಿಸುತ್ತಿದ್ದಾರೆ.

ಈ ಹಿನ್ನೆಲೆದಲ್ಲಿ ಅಖಿಲ ಭಾರತ ಜನವಾದಿ ಮಹಿಳಾ ಸಂಘಟನೆಯ ತಾಲೂಕು ಕಾರ್ಯದರ್ಶಿ ಸರ್ದಾರ್ ಹುಲಿಗೆಮ್ಮ ಅವರು ಮಾನವೀಯ ದೃಷ್ಟಿಯಿಂದ ನೆರವು ನೀಡುವಂತೆ ಮನವಿ ಮಾಡಿದ್ದಾರೆ. ಎಸ್‌ಎಲ್‌ಆರ್ ಕಂಪನಿಯ ಸಿಎಸ್‌ಆರ್ ವಿಭಾಗದ ಮುಖ್ಯಸ್ಥರಾದ ರಾಘವೇಂದ್ರ ಅವರಿಗೆ ಮನವಿ ಸಲ್ಲಿಸಿ, ಯೋಜನೆಯ ಮೂಲಕ ಅಗತ್ಯ ಔಷಧೋಪಚಾರ ಒದಗಿಸಲು ಕೋರಿದ್ದಾರೆ. ಸರ್ಕಾರದಿಂದ ದೊರೆಯುವ ಗೌರವಧನ ಜೀವನೋಪಾಯಕ್ಕೆ ಸಾಕಾಗುತ್ತಿಲ್ಲ. ಆದ್ದರಿಂದ ಇವರ ಜೀವನೋದ್ಧಾರಕ್ಕಾಗಿ ಹೆಚ್ಚುವರಿ ಸಹಾಯ ಅಗತ್ಯವಿದೆ ಎಂದು ಅವರು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಅಖಿಲ ಭಾರತ ಜನವಾದಿ ಮಹಿಳಾ ಸಂಘಟನೆ ಮತ್ತು ಒಂಟಿ ಮಹಿಳೆಯರ ಸಂಘಟನೆಯ ಗ್ರಾಮ ಘಟಕದ ತಾಲೂಕು ಮುಖಂಡರಾದ ರೇಖಾ ಒಂಟಿ, ಮಹಿಳೆಯರ ಘಟಕದ ಕಾರ್ಯದರ್ಶಿ ಕಾಳಿ ಮಂಜುಳಾ, ಹನುಮಂತಮ್ಮ, ಗೋಣೇಮ್ಮ, ಹನುಮಂತೆಮ್ಮ, ಜಯಲಕ್ಷ್ಮಮ್ಮ, ಖಾತಾನ್, ಬಿ. ಬಸಮ್ಮ, ಶಾರದಮ್ಮ ಹಾಗೂ ಇನ್ನಿತರ ಮಹಿಳೆಯರು ಉಪಸ್ಥಿತರಿದ್ದರು.

ಸಮಾಜದ ಎಲ್ಲ ವಲಯಗಳು ಕೈಜೋಡಿಸಿದರೆ ಈ ಒಂಟಿ ಮಹಿಳೆಯರ ಬದುಕಿನಲ್ಲಿ ಹೊಸ ಬೆಳಕು ಮೂಡಬಹುದು ಎಂಬ ನಿರೀಕ್ಷೆ ವ್ಯಕ್ತವಾಗಿದೆ.

# ಬಸಮ್ಮ ಪಾಟೀಲ ಶಾಲೆಗೆ ಸಿಬಿಎಸ್‌ಇ ಮಾನ್ಯತೆ



■ ವಿಜಯಸಾಕ್ಷಿ ಸುದ್ದಿ, ರೋಣ

ಪಟ್ಟಣದಲ್ಲಿ ಕಳೆದ 34 ವರ್ಷಗಳಿಂದ ಶಿಕ್ಷಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಆರ್‌ಜಿಎಸ್ ಶಿಕ್ಷಣ ಸಂಸ್ಥೆಯ ಅಂಗ ಸಂಸ್ಥೆಯಾದ ಮಾತೋಶ್ರೀ ಬಸಮ್ಮ ಎಸ್. ಪಾಟೀಲ ಶಾಲೆಗೆ ಕೇಂದ್ರ ಸರ್ಕಾರ ಸಿಬಿಎಸ್‌ಇ ಮಾನ್ಯತೆ ನೀಡಿದೆ ಎಂದು ಸಂಸ್ಥೆಯ ನಿರ್ದೇಶಕರು ಹಾಗೂ ಕೆಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಐ.ಎಸ್. ಪಾಟೀಲ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಸಕ ಜಿ.ಎಸ್. ಪಾಟೀಲರ ದೂರದೃಷ್ಟಿಯಿಂದ ಗ್ರಾಮೀಣ ಭಾಗದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸುವ ಉದ್ದೇಶದಿಂದ ಈ ಸಂಸ್ಥೆ ಸ್ಥಾಪನೆಯಾಗಿ ಇಂದು ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾಗಿ ಬೆಳೆಯಲು ಸಾಧ್ಯವಾಗಿದೆ ಎಂದರು.

ರೋಣ ಪಟ್ಟಣದಲ್ಲಿ ಸಿಬಿಎಸ್‌ಇ ಶಿಕ್ಷಣದ ಕೊರತೆ ಇತ್ತು. ಇದೀಗ ಜಿ.ಎಸ್. ಪಾಟೀಲರ ಪ್ರಯತ್ನದಿಂದ ಕೇಂದ್ರ ಸರ್ಕಾರದಿಂದ ಸಿಬಿಎಸ್‌ಇ ಶಾಲೆ ಆರಂಭಿಸಲು ಅಧಿಕೃತ ಮಾನ್ಯತೆ ದೊರೆತಿರುವುದು ಸಂತಸದ ಸಂಗತಿ.

ಇದರಿಂದ ಪಟ್ಟಣ ಹಾಗೂ ಸುತ್ತಮುತ್ತಲಿನ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ಪಡೆಯಲು ಅವಕಾಶ ಸಿಗಲಿದೆ ಎಂದು ಹೇಳಿದರು.

2026–27ನೇ ಶೈಕ್ಷಣಿಕ ವರ್ಷದಿಂದ ಸಿಬಿಎಸ್‌ಇ ಪಠ್ಯಕ್ರಮ ಆರಂಭವಾಗಲಿದ್ದು, ನರ್ಸರಿಯಿಂದ 9ನೇ ತರಗತಿವರೆಗೆ ತರಗತಿಗಳು ನಡೆಯಲಿವೆ. ಶಾಲೆಯಲ್ಲಿ ಸರ್ಕಾರದ ನಿಯಮಾನುಸಾರ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದ್ದು, ಹಿರಿಯ ಅಧಿಕಾರಿಗಳು ಭೇಟಿ ನೀಡಿ ಪ್ರಶಂಸೆ ವ್ಯಕ್ತಪಡಿಸಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ, ಪ್ರಾಚಾರ್ಯ ಡಾ. ಐ.ಬಿ. ಕೊಟ್ಟೂರಶೆಟ್ಟರ ಹಾಗೂ ಶ್ರೀಶೈಲ್ ಸಂಗೋಟಿ ಉಪಸ್ಥಿತರಿದ್ದರು.

# ಸನ್ಮಾರ್ಗ ಕಾಲೇಜಿನ ಪ್ರತಿಭೆಗೆ ಸನ್ಮಾನದ ಸೌರಭ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸ್ಟುಡೆಂಟ್ಸ್ ಎಜ್ಯುಕೇಶನ್ ಸೊಸೈಟಿಯ ಸನ್ಮಾರ್ಗ ಪದವಿ ಪೂರ್ವ ವಿಜ್ಞಾನ ಹಾಗೂ ವಾಣಿಜ್ಯ ವಿಭಾಗದ ವಿದ್ಯಾರ್ಥಿಗಳು ಪ್ರತಿವರ್ಷ ಸಾಧನೆಯ ಮೆಟ್ಟಿಲೇರಿಸುತ್ತಿರುವುದಕ್ಕೆ 2025–26ರ ದ್ವಿತೀಯ ಪಿಯು ಪರೀಕ್ಷೆಯ ಫಲಿತಾಂಶ ಸಾಕ್ಷಿಯಾಗಿದೆ.

ವಾಣಿಜ್ಯ ವಿಭಾಗದ ವಿದ್ಯಾರ್ಥಿನಿ ಕುಮಾರಿ ಸಾನ್ವಿ ಹಬೀಬ ಒಟ್ಟು ಶೇ.95.00 ಅಂಕ ಗಳಿಸಿ ಗಮನ ಸೆಳೆದಿದ್ದಾಳೆ. ಸಂಖ್ಯಾಶಾಸ್ತ್ರದಲ್ಲಿ 100ಕ್ಕೆ 93, ಲೆಕ್ಕಶಾಸ್ತ್ರದಲ್ಲಿ 100ಕ್ಕೆ 97 ಹಾಗೂ ಅರ್ಥಶಾಸ್ತ್ರದಲ್ಲಿ 100ಕ್ಕೆ 92 ಅಂಕಗಳನ್ನು ಪಡೆದು ಮಹಾವಿದ್ಯಾಲಯದ ವಾಣಿಜ್ಯ ವಿಭಾಗದಲ್ಲಿ ತೃತೀಯ ಸ್ಥಾನ ಪಡೆದಿದ್ದಾಳೆ.

ವಿದ್ಯಾರ್ಥಿನಿಯ ಸಾಧನೆಯನ್ನು ಮೆಚ್ಚಿದ ಕಾಲೇಜಿನ ಪ್ರಾಚಾರ್ಯ ಪ್ರೊ. ಪುನೀತ್ ದೇಶಪಾಂಡೆ, ಆಡಳಿತಾಧಿಕಾರಿ ಮೃತ್ಯುಂಜಯ್ಯ ಹಿರೇಮಠ ಹಾಗೂ ಪ್ರೊ. ಸಂಗೀತಾ ಬೀಳಗಿ ಅವರು ಅವರ ಸ್ವನಿವಾಸದಲ್ಲಿ ಸನ್ಮಾನಿಸಿದರು. ವಿದ್ಯಾರ್ಥಿನಿಯ ಅವಿರತ ಶ್ರಮ ಮತ್ತು ಉಪನ್ಯಾಸಕರ ಮಾರ್ಗದರ್ಶನವೇ ಈ ಸಾಧನೆಗೆ ಕಾರಣ ಎಂದು ಸಂಸ್ಥೆಯ ಚೇರ್ಮನ್ ಪ್ರೊ. ರಾಜೇಶ ಕುಲಕರ್ಣಿ ಸಂತೋಷ ವ್ಯಕ್ತಪಡಿಸಿದರು.

ವಾಣಿಜ್ಯ ವಿಭಾಗದ ಮುಖ್ಯಸ್ಥ ಪ್ರೊ. ಶಿವಕುಮಾರ ವಜ್ರಬಂಡಿ ಅವರು ವಿದ್ಯಾರ್ಥಿನಿ ನಿರೀಕ್ಷೆಗಳನ್ನು ಈಡೇರಿಸಿರುವುದಾಗಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಚೇರ್ಮನ್ ಪ್ರೊ. ರಾಜೇಶ ಕುಲಕರ್ಣಿ, ಪ್ರಾಚಾರ್ಯ ಪ್ರೊ. ಪುನೀತ್ ದೇಶಪಾಂಡೆ, ಆಡಳಿತಾಧಿಕಾರಿ ಮೃತ್ಯುಂಜಯ್ಯ ಹಿರೇಮಠ, ನಿರ್ದೇಶಕರುಗಳಾದ ಪ್ರೊ. ರೋಹಿತ್ ಒಡೆಯರ್, ಪ್ರೊ. ರಾಹುಲ್ ಒಡೆಯರ್, ಪ್ರೊ. ಸೈಯದ ಮತೀನ್ ಮುಲ್ಲಾ ಸೇರಿದಂತೆ ಉಪನ್ಯಾಸಕ ವೃಂದ ಹಾಗೂ ಬೋಧಕೇತರ ಸಿಬ್ಬಂದಿ ವಿದ್ಯಾರ್ಥಿನಿಯ ಭವಿಷ್ಯ ಉಜ್ವಲವಾಗಲಿ ಎಂದು ಹಾರೈಸಿದರು.

ಗಿಡ ನೆಟ್ಟು ಪರಿಸರ ಜಾಗೃತಿ ಮೂಡಿಸಿದ ವಕೀಲರು–ಸಿಬ್ಬಂದಿ

# ವಿಶ್ವ ಭೂ ದಿನ: ಪರಿಸರ ಸಂರಕ್ಷಣೆಗೆ ಸಂಕಲ್ಪ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿಶ್ವ ಭೂ ದಿನದ ಅಂಗವಾಗಿ ತಾಲ್ಲೂಕು ಕಾನೂನು ಸೇವಾ ಸಮಿತಿ ಲಕ್ಷ್ಮೇಶ್ವರ, ವಕೀಲರ ಸಂಘ ಲಕ್ಷ್ಮೇಶ್ವರ–ಶಿರಹಟ್ಟಿ ಹಾಗೂ ಅರಣ್ಯ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಬುಧವಾರ ನ್ಯಾಯಾಲಯದ ಆವರಣದಲ್ಲಿ ಗಿಡ ನೆಡುವ ಕಾರ್ಯಕ್ರಮ ನಡೆಯಿತು.

"ಭೂಮಿಯನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ಹಾಗೂ ಪರಿಸರದ ಕಾಳಜಿಯನ್ನು ಮಕ್ಕಳಲ್ಲಿ ಚಿಕ್ಕಂದಿನಿಂದಲೇ ಬೆಳೆಸುವುದು ಅಗತ್ಯ."

**– ಭರತ್ ಯೋಗೀಶ್ ಕರಗುದರಿ,** ಹಿರಿಯ ದಿವಾಣಿ ನ್ಯಾಯಾಧೀಶರು.

ಕಾರ್ಯಕ್ರಮದಲ್ಲಿ ಹಿರಿಯ ದಿವಾಣಿ ನ್ಯಾಯಾಧೀಶರಾದ ಭರತ್ ಯೋಗೀಶ್ ಕರಗುದರಿ ಮಾತನಾಡಿ, ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಭಾರತೀಯ ಸಂಸ್ಕೃತಿಯಲ್ಲಿ ಭೂಮಿಯೊಂದಿಗೆ ಅವಿನಾಭಾವ ಸಂಬಂಧವಿದ್ದು, ಅದನ್ನು ಉಳಿಸಿ ಬೆಳೆಸುವ ಹೊಣೆಗಾರಿಕೆ ನಮ್ಮದಾಗಿದೆ. ಪ್ರತಿಯೊಬ್ಬ ವಕೀಲರು ಹಾಗೂ ಸಿಬ್ಬಂದಿ ತಮ್ಮ ಹೆಸರಿನಲ್ಲಿ ಒಂದು ಗಿಡ ನೆಟ್ಟು ಅದನ್ನು ಪೋಷಿಸುವ ಸಂಕಲ್ಪ ಕೈಗೊಳ್ಳಬೇಕು ಎಂದು ಅವರು ಕರೆ ನೀಡಿದರು.

ದಿವಾಣಿ ನ್ಯಾಯಾಧೀಶರಾದ ಸತೀಶ ಎಂ. ಮಾತನಾಡಿ, ಪರಿಸರ ಸಂರಕ್ಷಣೆಯಲ್ಲಿ ಹಿರಿಯರು ಅನುಸರಿಸಿದ್ದ ಮಾರ್ಗವನ್ನು ನಾವು ಮುಂದುವರಿಸಬೇಕು. ಇದರಿಂದ ಜಾಗತಿಕ ತಾಪಮಾನವನ್ನು ಕಡಿಮೆ ಮಾಡಲು ಸಾಧ್ಯ ಎಂದು ಹೇಳಿದರು.

ಹಿರಿಯ ವಕೀಲರಾದ ಎಸ್.ಪಿ. ಬಳಿಗಾರ ಮಾತನಾಡಿ, ಎಪ್ರಿಲ್ 22ರಂದು ವಿಶ್ವ ಭೂ ದಿನವನ್ನು 1970ರಿಂದ ಆಚರಿಸಲಾಗುತ್ತಿದೆ. ಭೂಮಿಯನ್ನು ತಾಯಿಯಂತೆ ಗೌರವಿಸಿ ಸಂರಕ್ಷಿಸುವುದು ನಮ್ಮ ಕರ್ತವ್ಯ ಎಂದು ತಿಳಿಸಿದರು. ಪೂರ್ಣಚಂದ್ರ ತೇಜಸ್ವಿ ಅವರ ಸಾಹಿತ್ಯ ಕೃತಿಗಳು ಪರಿಸರ ಜಾಗೃತಿಗೆ ಪ್ರೇರಣೆ ನೀಡುತ್ತವೆ ಎಂದರು.

ಈ ಸಂದರ್ಭದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕಿ ಹೀನಾಕೌಸರ ಗಂಜಿಹಾಳ, ಉಪವಲಯ ಅರಣ್ಯಾಧಿಕಾರಿ ಪ್ರಕಾಶ ಕರಗುಪ್ಪಿ, ವಕೀಲರ ಸಂಘದ ಅಧ್ಯಕ್ಷ ಬಿ.ವಿ. ನೇಕಾರ್, ಉಪಾಧ್ಯಕ್ಷ ಎಸ್.ಎಂ. ನಾವಿ, ಪ್ರಧಾನ ಕಾರ್ಯದರ್ಶಿ ವಿ.ಎಸ್. ಪಶುಪತಿಹಾಳ, ಹಿರಿಯ ವಕೀಲರಾದ ಬಿ.ಎಸ್. ಘೋಂಗಡಿ, ಮಹೇಶ ಹಾರೋಗೇರಿ ಹಾಗೂ ನ್ಯಾಯಾಲಯದ ಸಿಬ್ಬಂದಿ ಉಪಸ್ಥಿತರಿದ್ದರು. ಗಸ್ತು ಅರಣ್ಯ ಪಾಲಕ ಮಂಜುನಾಥ ಚೌವ್ಹಾಣ ಕಾರ್ಯಕ್ರಮವನ್ನು ನಿರೂಪಿಸಿದರು.



# ಭಕ್ತರ ಶ್ರದ್ಧೆಯಿಂದ ಕಲ್ಯಾಣ ಮಂಟಪ ನಿರ್ಮಾಣ: ಜಿ.ಎಸ್. ಪಾಟೀಲ

▸▸ ಮೊದಲನೇ ಪುಟದಿಂದ

ಕಾಶಪ್ಪನವರ, ರುದ್ರಣ್ಣ ಗುಳಗುಳಿ, ಬಸವರಾಜ ಜಗ್ಗಲ, ಬಸವರಾಜ ನೀಲಗಾರ ಸೇರಿದಂತೆ ಹಲವು ಗಣ್ಯರನ್ನು ಸನ್ಮಾನಿಸಲಾಯಿತು.

ಮುಗಳಿ ಮೂಲದ ರಾಮಪ್ಪ ಕಾಶಪ್ಪನವರ ಅವರ ಸಾಮಾಜಿಕ, ಧಾರ್ಮಿಕ ಹಾಗೂ ಶೈಕ್ಷಣಿಕ ಸೇವೆಯನ್ನು ಇದೇ ಸಂದರ್ಭದಲ್ಲಿ ಪ್ರಶಂಸಿಸಲಾಯಿತು.

ಸಮಾರಂಭದಲ್ಲಿ ಮುಗಳಿ ಹಾಗೂ ರೋಣ ಸುತ್ತಮುತ್ತಲಿನ ಗ್ರಾಮಗಳ ಭಕ್ತಾಧಿಗಳು ಹಾಗೂ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

# ಸಿಡಿಲು ಬಡಿದು ತೆಂಗಿನ ಮರಕ್ಕೆ ಬೆಂಕಿ



■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ವಟ್ಟಮನಹಳ್ಳಿ ಗ್ರಾಮದಲ್ಲಿ ಮಂಗಳವಾರ ಸಂಜೆ ಗುಡುಗು–ಸಿಡಿಲು ಸಹಿತ ಸುರಿದ ಮಳೆಯಲ್ಲಿ ಸಿಡಿಲು ಬಡಿದು ತೆಂಗಿನ ಮರಕ್ಕೆ ಬೆಂಕಿ ಕಾಣಿಸಿಕೊಂಡ ಘಟನೆ ನಡೆದಿದೆ.

ಗ್ರಾಮದ ತೋಟವೊಂದರಲ್ಲಿ ಸಿಡಿಲಿನ ಹೊಡೆತಕ್ಕೆ ತೆಂಗಿನ ಮರದಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ಈ ದೃಶ್ಯವನ್ನು ಸ್ಥಳೀಯರು ಮೊಬೈಲ್‌ನಲ್ಲಿ ಚಿತ್ರೀಕರಿಸಿದ್ದಾರೆ.

ಜೋರಾದ ಗಾಳಿಮಳೆಯಿಂದ ಸುತ್ತಮುತ್ತಲಿನ ದಶಮಾಪುರ, ವರಲಹಳ್ಳಿ, ಬೆಣಕಲ್ಲು, ಕೋಗಳಿ ತಾಂಡ ಹಾಗೂ ಮಾಲವಿ ಗ್ರಾಮಗಳಲ್ಲಿ ರಾಗಿ, ಬಾಳೆ ಹಾಗೂ ಇತರ ತೋಟಗಳಿಗೆ ಹಾನಿ ಉಂಟಾಗಿದೆ ಎಂದು ತಿಳಿದು ಬಂದಿದೆ.

ಪಟ್ಟಣ ಸೇರಿದಂತೆ ತಾಲೂಕಿನ ಹಲವು ಗ್ರಾಮಗಳಲ್ಲಿ ತುಂತುರು ಮಳೆಯಾಗಿದ್ದು, ಕೆಲವೆಡೆ ಗಾಳಿಯ ತೀವ್ರತೆಗೆ ಬೆಳೆಗಳಿಗೆ ಹಾನಿಯಾಗಿದೆ ಎಂದು ವರದಿಯಾಗಿದೆ.

# ಬಸವಣ್ಣನವರು ಕ್ರಾಂತಿಕಾರಿ ಚಿಂತಕರು: ಶಾಸಕ ಜಿ.ಎಸ್. ಪಾಟೀಲ



■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಬಸವಣ್ಣನವರ ಆದರ್ಶಗಳು ಇಂದಿನ ಯುವ ಪೀಳಿಗೆಗೆ ಅತ್ಯಂತ ಅಗತ್ಯವಾದ ದಾರಿದೀಪಗಳಾಗಿವೆ. ಅವರು ಕೇವಲ ಒಂದು ಧರ್ಮದ ಸ್ಥಾಪಕರಲ್ಲ, ಬದಲಾಗಿ ಒಂದು ಕ್ರಾಂತಿಕಾರಿ ಚಿಂತಕರು. ಸಮಾನತೆಗಾಗಿ 12ನೇ ಶತಮಾನದಲ್ಲಿ ಹೋರಾಟ ಮಾಡಿ ಜಗಕ್ಕೆ ಬೆಳಕಾದವರು ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಗಜೇಂದ್ರಗಡ ತಾಲೂಕಿನ ಸೂಡಿ ಗ್ರಾಮದಲ್ಲಿ ಶ್ರೀ ಬಸವಣ್ಣನವರ ವೃತ್ತ ಉದ್ಘಾಟನೆ ಹಾಗೂ ಮೂರ್ತಿ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಪೂಜೆ ಸಲ್ಲಿಸಿ ಮಾತನಾಡಿದ ಅವರು, ಬಸವಣ್ಣನವರು ಹಾಕಿಕೊಟ್ಟ ದಾರಿಯಲ್ಲಿ ನಡೆಯುವುದು ಇಂದಿನ ಸಮಾಜಕ್ಕೆ ಅತ್ಯಂತ ಅಗತ್ಯವಾಗಿದೆ. ಅವರು 12ನೇ ಶತಮಾನದಲ್ಲೇ ಮೌಢ್ಯಗಳ ವಿರುದ್ಧ ಹೋರಾಟ ನಡೆಸಿ ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳಬೇಕೆಂದು ಸಂದೇಶ ನೀಡಿದ್ದಾರೆ ಎಂದು ಹೇಳಿದರು.


ಶರಣರ ಕಲ್ಯಾಣ ಕ್ರಾಂತಿಯ ಮೂಲಕ ಸಮಾನತೆ, ನ್ಯಾಯ ಮತ್ತು ಸಮಾನ ಅವಕಾಶಕ್ಕಾಗಿ ನಡೆದ ಹೋರಾಟವನ್ನು ಯುವ ಪೀಳಿಗೆ ತಿಳಿದುಕೊಳ್ಳಬೇಕು.

ಬಸವಣ್ಣನವರ ಪ್ರತಿಯೊಂದು ವಚನವೂ ಬದುಕಿನ ಪಾಠವಾಗಿದೆ. ಇವುಗಳನ್ನು ಮಕ್ಕಳಿಗೆ ಕಲಿಸಿದರೆ ಉತ್ತಮ ಸಂಸ್ಕಾರ ಬೆಳೆಸಿಕೊಳ್ಳಬಹುದು ಎಂದು ಹೇಳಿದರು.

ಪೋಷಕರು ಮಕ್ಕಳಿಗೆ ವಚನ ಸಾಹಿತ್ಯವನ್ನು ಕಲಿಸಬೇಕು. ಬಸವಣ್ಣನವರ ಕಾಯಕ ತತ್ವ ಇಡೀ ಜಗತ್ತಿಗೆ ಆದರ್ಶವಾಗಿದ್ದು, ಪ್ರತಿಯೊಬ್ಬರೂ ಶ್ರಮದಿಂದ ಬದುಕು ಕಟ್ಟಿಕೊಳ್ಳಬೇಕು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ವಿಜಯ ಮಹಾಂತೇಶ ಸ್ವಾಮೀಜಿ, ವೀರಣ್ಣ ಶೆಟ್ಟರ್, ಭುಜಂಗಭಟ್ ಜೋಷಿ, ರಾಘವೇಂದ್ರ ಕುಲಕರ್ಣಿ, ಶರೀಫ್ ಡಾಲಾಯತ, ಚನ್ನಪ್ಪ ನೂಲ್ವಿ, ಹುಸೈನಸಾಬ್ ಬೆಳ್ಳಟ್ಟಿ, ಬೀರಪ್ಪ ಮಾರಣಬಸರಿ, ನಿಂಗಪ್ಪ ಕಾಸಪ್ಪನವರ ಸೇರಿದಂತೆ ಊರಿನ ಹಿರಿಯರು ಉಪಸ್ಥಿತರಿದ್ದರು.

# ಜೀರ್ಣೋದ್ಧಾರಗೊಂಡ ಶ್ರೀ ಸಾಲೇಶ್ವರ ದೇವಸ್ಥಾನ ಇಂದು ಲೋಕಾರ್ಪಣೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಬಸ್ತಿಬಣದಲ್ಲಿ ಪುರಾತನ ಇತಿಹಾಸ ಹೊಂದಿರುವ ಶ್ರೀ ಸಾಲೇಶ್ವರ ದೇವಸ್ಥಾನ ಜೀರ್ಣೋದ್ಧಾರಗೊಂಡು ಎಪ್ರಿಲ್ 23ರಂದು ಗುರುವಾರ ಲೋಕಾರ್ಪಣೆಗೊಳ್ಳಲಿದೆ.

ಗುರುವಾರ ಮುಂಜಾನೆ 7 ಗಂಟೆಗೆ ಪೂರ್ಣಕುಂಭ ಹಾಗೂ ಪಲ್ಲಕ್ಕಿ ಮೆರವಣಿಗೆ ನಡೆಯಲಿದ್ದು, ಬೆಳಿಗ್ಗೆ 10.30ಕ್ಕೆ ದೇವಸ್ಥಾನದ ಲೋಕಾರ್ಪಣೆ ಹಾಗೂ ಮೂರ್ತಿ ಪ್ರಾಣಪ್ರತಿಷ್ಠಾಪನೆ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಸಂಪ್ರದಾಯದಂತೆ ಜರುಗಲಿವೆ.

ನಂತರ ಬೆಳಿಗ್ಗೆ 11 ಗಂಟೆಗೆ ನಡೆಯುವ ಧರ್ಮಸಭೆಗೆ ಹೂವಿನಶಿಗ್ಲಿ ವಿರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಹಾಗೂ ಕರೇವಾಡಿ ಮಠದ ಶ್ರೀ ಮಳೆಮಲ್ಲಿಕಾರ್ಜುನ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ಶಿವಸಮಸಾಲಿ ಸಮಾಜದ ಅಧ್ಯಕ್ಷ ಶಾಂತಪ್ಪ ಗುಡಗೇರಿ ಅಧ್ಯಕ್ಷತೆ ವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕರುಗಳಾದ ಜಿ.ಎಸ್. ಗಡ್ಡದೇವರಮಠ, ಜಿ.ಎಂ. ಮಹಾಂತಶೆಟ್ಟರ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಕೆಪಿಸಿಸಿ ಕಾರ್ಯದರ್ಶಿ ಸುಜಾತಾ ದೊಡ್ಡಮನಿ ಸೇರಿದಂತೆ ಹಲವು ಗಣ್ಯರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಇದೇ ವೇಳೆ ಶಿವಪ್ರಕಾಶ ಲಿಂಬಯ್ಯಸ್ವಾಮಿಮಠ, ವಿರುಪಾಕ್ಷಪ್ಪ ಪಡಗೇರಿ, ಎಂ.ಆರ್. ಪಾಟೀಲ, ಯಲ್ಲವ್ವ ದುರಗಣ್ಣವರ, ಬಸವರಾಜ ಓದುನವರ, ರಾಜಣ್ಣ ಕುಂಬಿ, ಶಿವಣ್ಣ ಕೋಳಿವಾಡ, ಐ.ಎಸ್. ಹುಲ್ಲೂರ, ನಿಂಗಪ್ಪ ಮಂಟಗಣಿ, ಸಾವಿತ್ರಮ್ಮ ನೇಕಾರ, ಆನಂದಸ್ವಾಮಿ ಗಡ್ಡದೇವರಮಠ, ಅಶೋಕ ಮಂಡಿಗನಾಳ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿರುವರು. ಈ ಕುರಿತು ಅಧ್ಯಕ್ಷ ಶಾಂತಪ್ಪ ಗುಡಗೇರಿ, ಉಪಾಧ್ಯಕ್ಷ ಮಲ್ಲಪ್ಪ ಮಂಟಗಣಿ, ಕಾರ್ಯದರ್ಶಿ ವೀರಭದ್ರಪ್ಪ ಕಲಕೋಟಿ ಹಾಗೂ ಖಜಾಂಚಿ ರಾಜೇಶ್ ಗುಡಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಧ್ವಜಾರೋಹಣದೊಂದಿಗೆ ವಾಸವಿ ಜಯಂತಿಗೆ ಚಾಲನೆ

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪಟ್ಟಣದ ಆರ್ಯವೈಶ್ಯ ಸಮಾಜದ ವತಿಯಿಂದ ಶ್ರೀ ವಾಸವಿ ಜಯಂತಿಯ ಅಂಗವಾಗಿ ಜ್ಯೋತಿ ಪ್ರಜ್ವಲನೆ ಹಾಗೂ ಧ್ವಜಾರೋಹಣ ಕಾರ್ಯಕ್ರಮ ಭಕ್ತಿಭಾವದಿಂದ ನೆರವೇರಿತು.

ಕನ್ಯಕಾಪರಮೇಶ್ವರಿ ದೇವಸ್ಥಾನದಿಂದ ವಾಸವಿ ಜ್ಯೋತಿಯನ್ನು ಮೆರವಣಿಗೆ ಮೂಲಕ ನಗರದಲ್ಲಿ ತರಲಾಗಿದ್ದು, ದೇವಸ್ಥಾನದಲ್ಲಿ ಜ್ಯೋತಿ ಪ್ರಜ್ವಲನೆ ಹಾಗೂ ಧ್ವಜಾರೋಹಣ ನೆರವೇರಿಸುವ ಮೂಲಕ ಜಯಂತಿ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಮುಖಂಡರು, ಶ್ರೀ ವಾಸವಿ ತಾಯಿಯ ತತ್ವಗಳು ಸಮಾಜದಲ್ಲಿ ಶಾಂತಿ, ಸೌಹಾರ್ದ ಹಾಗೂ ಸಮಾನತೆ ಸ್ಥಾಪನೆಗೆ ಮಾರ್ಗದರ್ಶಿಯಾಗಿವೆ ಎಂದು ಹೇಳಿದರು. ಯುವ ಪೀಳಿಗೆಗೆ ಸಂಸ್ಕೃತಿ ಹಾಗೂ ಪರಂಪರೆಯ ಮಹತ್ವ ತಿಳಿಸುವಲ್ಲಿ ಇಂತಹ ಆಚರಣೆಗಳು ಮುಖ್ಯವೆಂದು ಅಭಿಪ್ರಾಯಪಟ್ಟರು.

ಎಪ್ರಿಲ್ 26ರಂದು ವಾಸವಿ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಲಾಗುವುದು ಎಂದು ತಿಳಿಸಲಾಯಿತು.

ಇದೇ ವೇಳೆ ಮಹಿಳೆಯರು ವಾಸವಿ ಕಳಶವನ್ನು ಪ್ರಮುಖ ಮಾರ್ಗಗಳಲ್ಲಿ ಮೆರವಣಿಗೆ ನಡೆಸಿ ದೇವಸ್ಥಾನಕ್ಕೆ ತಂದು ಪ್ರತಿಷ್ಠಾಪಿಸಿದರು. ಕಳಶ ತಂದ ಮಹಿಳೆಯರಿಗೆ ಸೀರೆಯನ್ನು ಪ್ರಸಾದವಾಗಿ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಸಮಾಜದ ಮುಖಂಡರು ಹಾಗೂ ಮಹಿಳಾ ಮಂಡಳಿ ಸದಸ್ಯರು ಉಪಸ್ಥಿತರಿದ್ದರು.



VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka